ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 94 | Volume - 02 Issue - 94
ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | RNI No: KARKAN/2023/88462
ಚಿತ್ರದುರ್ಗ | Chitradurga
ದಿನಾಂಕ: 28–10–2024 ಸೋಮವಾರ | Date: 28-10-2024 Monday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



**ಒಳಪುಟದ ಸುದ್ದಿಗಳು**
ಒಳ ಮೀಸಲಾತಿ ಜಾರಿಗೆ ನನ್ನ ಬೆಂಬಲವಿದೆ: ಶಾಸಕ ಬಿ.ಜಿ.ಗೋವಿಂದಪ್ಪ 2
ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಚಾಲನೆ 3
ಹಾಲುರಾಮೇಶ್ವರ ಕ್ಷೇತ್ರಕ್ಕೆ ಭಕ್ತರಿಂದ ಪಡೆದ 11 ರೂ ಕಾಣಿಕೆ ಇಂದು 3 ಕೋಟಿ ಆಗಿದೆ 4



ಸುದ್ದಿ, ಜಾಹಿರಾತಿಗೆ 9686622252


## ಮಾದಿಗ ಸಮುದಾಯದ ಆಸ್ತಿ ಸಂರಕ್ಷಣೆ ಸಮಸ್ಯೆಗೆ ಪ್ರಾಮಾಣಿಕ ಪರಿಹಾರ: ಶಾಸಕ

# ರಘುಮೂರ್ತಿ ಭರವಸೆ: ಧರಣಿ ವಾಪಸ್

» **ಚಳ್ಳಕೆರೆ**

ನಗರಸಭೆ ಮುಂಭಾಗದಲ್ಲಿ ಕಳೆದ ಮೂರು ದಿನಗಳಿಂದ ಮಾದಿಗ ಸಮುದಾಯದ ಆಸ್ತಿ ರಕ್ಷಣೆಗಾಗಿ ದಲಿತ ಮುಖಂಡ, ಜಿಲ್ಲಾ ಮಾದಿಗಮಹಾಸಭಾದ ಅಧ್ಯಕ್ಷ ಎಂ.ಶಿವಮೂರ್ತಿ ನೇತೃತ್ವದಲ್ಲಿ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನೀಡಿದ ಭರವಸೆ ಮೇರೆಗೆ ಧರಣಿಸತ್ಯಾಗ್ರಹ ವಾಪಾಸ್ ಪಡೆದಿರುವುದಾಗಿ ಶಿವಮೂರ್ತಿ ತಿಳಿಸಿದರು.





ಧರಣಿನಿರತ ಮಾದಿಗ ಸಮುದಾಯದ ಮುಖಂಡರನ್ನು ಉದ್ದೇಶಿಸಿ ಮಾತನಾಡಿದ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ, ಕಳೆದ ಹಲವಾರು ವರ್ಷಗಳಿಂದ ಈ ಸಮಸ್ಯೆಯ ಬಗ್ಗೆ ಹೋರಾಟ ನಡೆಯುತ್ತಲೇ ಇದೆ. ಮಾದಿಗ ಸಮುದಾಯದ ಆಸ್ತಿ ಬಗ್ಗೆ ಇರುವ ಸಮಸ್ಯೆಯನ್ನುನ್ಯಾಯ ಸಮ್ಮತವಾಗಿ ತೀರ್ಮಾನಗೊಳ್ಳಲು ಈಗಾಗಲೇ ಜಿಲ್ಲಾಧಿಕಾರಿ, ತಹಶೀಲ್ದಾರ್ ಮತ್ತು ಪೌರಾಯುಕ್ತರಿಗೆ ನೀಡಿದ್ದೇನೆ. ದಾಖಲಾತಿಗಳ ಪರಿಶೀಲನೆ ನಂತರ ನಿಮಗೆ ಸ್ಪಷ್ಟವಾದ ಚಿತ್ರಣ ಸಿಗಲಿದೆ. ಮುಂದಿನ ದಿನಗಳಲ್ಲಿ ಚರ್ಮದ ಮಂಡಿ, ಚರ್ಮಮಾರಾಟ ಮಳಿಗೆ ಕಾರ್ಯಚಟುವಟಿಕೆಗಳಿಗೆ ಆರ್ಥಿಕ ನೆರವು ಒದಗಿಸುವ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳುವ ಭರವಸೆ ನೀಡಿದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಮಾದಿಗ ಸಮುದಾಯದ ಆಸ್ತಿ ರಕ್ಷಣೆಗಾಗಿ ಹೋರಾಟ ನಡೆಸುತ್ತಿದ್ದೀರಿ, ಈಗಾಗಲೇ ಶಾಸಕರ ಮಾರ್ಗದರ್ಶನದಂತೆ ತಹಶೀಲ್ದಾರ್ ಮತ್ತು ಪೌರಾಯುಕ್ತರೊಂದಿಗೆ ದಾಖಲಾತಿಯ ಪರಿಶೀಲನೆ ನಡೆಸಿದ್ದೇನೆ. ಯಾವುದೇ ಕಾರಣಕ್ಕೂ ನಿಮ್ಮ ಸಮಾಜಕ್ಕೆ ಅನ್ಯಾಯವಾಗದಂತೆ ಜಾಗ್ರತೆ ವಹಿಸಲಾಗುವುದು. ನಾವೆಲ್ಲರೂ ಕಾನೂನು ಪಾಲಕರಾಗಬೇಕು. ದಾಖಲಾತಿಗಳ ಆಧಾರದಮೇಲೆ ನ್ಯಾಯಸಮ್ಮತ ತೀರ್ಮಾನ ನೀಡಲು ಸಾಧ್ಯ. ಧರಣಿಯನ್ನು ಕೈಬಿಟ್ಟು ಜಿಲ್ಲಾಡಳಿತದೊಂದಿಗೆ ಕೈಜೋಡಿಸಿ ಎಂದರು.

ತಹಶೀಲ್ದಾರ್ ರೇಹಾನ್‌ಪಾಷ, ಚರ್ಮದ ಮಂಡಿಗೆ ನಾಲ್ಕು ಎಕರೆ ಜಾಗವಿರುವುದಾಗಿ ಸಮಾಜದ ಬಂಧುಗಳು ತಿಳಿಸಿದ್ದಾರೆ. ವಾಸ್ತವಾಗಿ ಕೇವಲ ಎರಡು ಎಕರೆ ಇದೆ. ಈ ಬಗ್ಗೆ ಬೇರೆಕೋಮಿನ ಜನರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ. ನ್ಯಾಯಾಲಯದಲ್ಲಿ ಪ್ರಕರಣ ಇರುವಾಗ ತೀರ್ಮಾನ ಕೈಗೊಳ್ಳಲು ಬರುವುದಿಲ್ಲವೆಂದರು.

ಎಂ.ಶಿವಮೂರ್ತಿ ಮಾತನಾಡಿ, ಚಳ್ಳಕೆರೆ ನಗರದಲ್ಲಿ ಬೇರೆ ಎಲ್ಲಾ ಸಮುದಾಯಗಳು ತಮ್ಮದೇಯಾದ ಆಸ್ತಿ ಮತ್ತು ಅಸ್ಥಿತ್ವವನ್ನು ಹೊಂದಿವೆ. ಕೆಲವು ಸಮುದಾಯಗಳು ಕಾಂಪ್ಲೆಕ್ಸ್‌ಗಳನ್ನು ನಿರ್ಮಿಸಿಕೊಂಡಿವೆ. ಅದು ನಮ್ಮ ಪೂರ್ವಜನರು 1959ರಲ್ಲಿ ರಿ.ಸರ್ವೆ, ನಂ 180ರಲ್ಲಿ ನಾಲ್ಕು ಎಕರೆ, ಬೆಂಗಳೂರು ರಸ್ತೆಯ ಈದ್ಗಾ ಮೈದಾನದ ಪಕ್ಕ 30ಗುಂಟೆ ಜಮೀನನ್ನು 5 ಸಾವಿರ ಪಾವತಿಸಿ ಪಡೆದಿದ್ದಾರೆ. ಸುಮಾರು 70 ಸಾವಿರ ಹಣವನ್ನು ನಗರಸಭೆಗೆ ಪಾವತಿಸಲಾಗಿದೆ, ಆದರೆ ನಗರಸಭೆ ಅಧಿಕಾರಿಗಳು ದಾಖಲಾತಿಗಳನ್ನು ಸೇರಿಸಿ ಇ–ಸ್ವತ್ತು ಕೊಡಲು ಸಿದ್ದರಿಲ್ಲ. ಪೌರಾಯುಕ್ತ ಜಗರೆಡ್ಡಿ ನಿರ್ಲಕ್ಷ್ಯದ ಮಾತುಗಳನ್ನು ಆಡುತ್ತಾರೆಂದು ದೂರಿದರು. ದಲಿತ ಮುಖಂಡ ಕೃಷ್ಣಮೂರ್ತಿ, ದ್ಯಾವರನಹಳ್ಳಿ ತಿಪ್ಪೇಸ್ವಾಮಿ, ಹೊಟ್ಟೆಪ್ಪನಹಳ್ಳಿ ಕಾಂತರಾಜು, ವೆಂಕಟೇಶ್ ಮೊದಲಾದವರು ಪೌರಾಯುಕ್ತರ ಉಡಾಫೆ ಮಾತುಗಳ ಬಗ್ಗೆ ಶಾಸಕರ ಗಮನಸೆಳೆದರು. ಶಾಸಕರು ಸಮುದಾಯದ ಹಿತಕ್ಕಾಗಿ ಚರ್ಮದ ಮಂಡಿ ಮತ್ತು ಮಾರಾಟ ಮಳಿಗೆ ನಿರ್ಮಿಸಿಕೊಡುವಂತೆ ಮನವಿ ಮಾಡಿದರು. ಮಾದಿಗ ಸಮುದಾಯ ಸದಾಕಾಲ ಶಾಸಕರಿಗೆ ಸಹಕರಿಸುತ್ತದೆ ಎಂದರು. ಇದೇ ಸಂದರ್ಭದಲ್ಲಿ ಶಾಸಕರ ಮಾತಿಗೆ ಮನ್ನಣೆ ನೀಡಿ ಧರಣಿಯನ್ನು ವಾಪಸ್ ಪಡೆಯುವುದಾಗಿ ತಿಳಿಸಿದರು.

ಪೌರಾಯುಕ್ತರ ಜಗರೆಡ್ಡಿ, ವ್ಯವಸ್ಥಾಪಕ ಲಿಂಗರಾಜು, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮ ಲೆಕ್ಕಿಗ ಪ್ರಕಾಶ್, ನಗರಸಭೆ ಕಂದಾಯಾಧಿಕಾರಿ ಸತೀಶ್, ಭೂತಯ್ಯ, ಚೇತನ್, ನಗರಸಭಾ ಸದಸ್ಯರಾದ ಕೆ.ವೀರಭದ್ರಪ್ಪ, ಎಂ.ಜೆ. ರಾಘವೇಂದ್ರ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ನಾಮಿನಿ ಸದಸ್ಯರಾದ ಬಡಗಿಪಾಪಣ್ಣ, ಆರ್.ವೀರಭದ್ರಪ್ಪ,ಮುಖಂಡರಾದಚಂದ್ರು, ಚನ್ನಕೇಶವಮೂರ್ತಿ, ಚನ್ನಿಗರಾಯ, ಎಚ್.ಪ್ರಕಾಶ್, ಭೀಮನಕೆರೆಶಿವಮೂರ್ತಿ, ಪಾಪಣ್ಣ ಮುಂತಾದವರು ಇದ್ದರು.

# ವಿ.ವಿ ಸಾಗರಕ್ಕೆ ಕ್ರಸ್ಟ ಗೇಟ್ ಅಳವಡಿಕೆಗೆ ವಿರೋಧ

» **ಹೊಸದುರ್ಗ**

ತಾಲ್ಲೂಕಿನ ವಿವಿ ಸಾಗರ ಜಲಾಶಯಕ್ಕೆ ಕ್ರಸ್ಟ್ ಗೇಟ್ ಅಳವಡಿಸಿ, ನೀರನ್ನು ಬೇರೆಡೆಗೆ ಹರಿಯಿಸುವ ಬದಲು, ನೀರು ಜಿಲ್ಲೆಯ ಜನತೆಗೆ ಅನುಕೂಲವಾಗುವಂತಹ ಕಾರ್ಯ ಮಾಡಬೇಕು. ಕ್ರಸ್ಟ್ ಗೇಟ್ ಅಳವಡಿಕೆ ಬೇಡ ಎಂದು ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ ಅಭಿಪ್ರಾಯಪಟ್ಟರು.

ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಪಟ್ಟಣದ ಎಪಿಎಂಸಿ ಆವರಣದಲ್ಲಿ ಶನಿವಾರ ಆಯೋಜಿಸಿದ್ದ 'ವಿವಿ ಸಾಗರಕ್ಕೆ ಕ್ರಸ್ಟ್ ಗೇಟ್ ಅಳವಡಿಸುವುದರ ಕುರಿತು ಸಾಧಕ ಬಾಧಕಗಳ ಸಮಾಲೋಚನಾ ಸಭೆ'ಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.



ವಿವಿ ಸಾಗರದ ಹಿನ್ನೀರಿನಲ್ಲಿ ತಾಲ್ಲೂಕಿನ ರೈತ ಸ್ಥಿತಿ ಗತಿ ತಿಳಿಯಲು ಈಗಾಗಲೇ ತಹಶೀಲ್ದಾರ್ ಭೇಟಿ ನೀಡಿ, ಸ್ಥಳ ಪರಿಶೀಲನೆ ನಡೆಸಿದ್ದಾರೆ. ರಾಜ್ಯದಲ್ಲಿಯೇ ಮೊದಲ ಅಣೆಕಟ್ಟು ವಿವಿ ಸಾಗರ ಆಗಿದ್ದು, ಅದನ್ನು ಉಳಿಸಿಕೊಳ್ಳುವ ಹೊಣೆ ನಮ್ಮ ಮೇಲಿದೆ. ಯಥಾಸ್ಥಿತಿ ಕಾಪಾಡಿಕೊಳ್ಳಬೇಕು. ಕ್ರಸ್ಟ್ ಗೇಟ್ ಅಳವಡಿಸುವ ಬದಲು ತಾಲ್ಲೂಕಿನಲ್ಲಿ ಸೂಕ್ತವಾದ ಸ್ಥಳದಲ್ಲಿ ತಜ್ಞರ ಸಲಹೆ ಪಡೆದು, ಬ್ಯಾರೇಜ್ ನಿರ್ಮಿಸಿ, ಲಿಫ್ಟ್ ಮಾಡುವ ಮೂಲಕ ಸುತ್ತಲಿನ ಕೆರೆಗಳಿಗೆ ನೀರು ತುಂಬಿಸಬಹುದು. ಡ್ಯಾಂ 125 ಅಡಿ ತಲುಪುವ ಮುನ್ನವೇ ಈ ಕಾರ್ಯ ಮಾಡಿದರೆ, ಕೆರೆಗಳು ಭರ್ತಿಯಾಗುವುದರಿಂದ ತಾಲ್ಲೂಕಿನ ರೈತರಿಗೂ ಅನುಕೂಲವಾಗುತ್ತದೆ ಎಂದರು.

ಜಿಲ್ಲೆಯಲ್ಲಿ ಮಳೆನೀರು ದೊರೆತಾದ ಅದರ ಸದ್ಬಳಕೆಯಾಗಬೇಕು. ಈ ನಿಟ್ಟಿನಲ್ಲಿ ಸ್ವಲ್ಪ ತ್ಯಾಗವೂ ಅವಶ್ಯ. 2022 ರಲ್ಲಿ ವಿವಿ ಸಾಗರದ ಹಿನ್ನೀರಿನಲ್ಲಿ ತಾಲ್ಲೂಕಿನ ರೈತರು ಅಪಾರ ನಷ್ಟ ಅನುಭವಿಸಿದರು. ಅವರಿಗೆ ಪರಿಹಾರ ನೀಡಿಲ್ಲ, ಅವರನ್ನು ಒಕ್ಕಲೆಬ್ಬಿಸುವ ಕೆಲಸ ನಡೆಯುತ್ತಿದೆ. ಹಿನ್ನೀರಿನ ರೈತರ ಬಗ್ಗೆ ಮಾತನಾಡಲು ಶಾಸಕರಿಗೆ ನೈತಿಕತೆಯಿಲ್ಲ ಎಂದು ಗುಡುಗಿದರು.

## ಕುಮಾರಸ್ವಾಮಿಯವರು ಹಿಂದೆ ಚುನಾವಣೆಯಲ್ಲಿ ಸೋತಾಗ ಅಭಿಮನ್ಯು ಆಗಿರಲಿಲ್ಲವೇ ? ಸಿಎಂ



**ಬೆಂಗಳೂರು:** ಕುಮಾರಸ್ವಾಮಿಯವರು ಹಿಂದೆ ಮುಖ್ಯಮಂತ್ರಿಯಾಗಿದ್ದಾಗ, ಮಂಡ್ಯದಲ್ಲಿ ಹಾಗೂ ನಂತರ ರಾಮನಗರದಲ್ಲಿ ಸೋತಿದ್ದರು. ಆಗ ಅವರು ಅಭಿಮನ್ಯು ಆಗಿರಲಿಲ್ಲವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮರುಪ್ರಶ್ನಿಸಿದರು.ನಿಖಿಲ್ ಕುಮಾರಸ್ವಾಮಿ ಉಪಚುನಾವಣೆಯಲ್ಲಿ ಅಭಿಮನ್ಯುವಲ್ಲ, ಅರ್ಜುನನಾಗಿ ಹೊರಹೊಮ್ಮಮಲಿದ್ದಾರೆ ಎಂದು ಕೇಂದ್ರ ಸಚಿವ ಕುಮಾರಸ್ವಾಮಿಯವರು ಹೇಳಿರುವ ಬಗ್ಗೆ ಅವರು ಪ್ರತಿಕ್ರಿಯೆ ನೀಡಿದರು.ಉಪಚುನಾವಣೆಗಳ ಸಿದ್ದತೆಗಳ ಬಗ್ಗೆ ಕಾರ್ಯಪ್ರವೃತ್ತರಾಗುವಂತೆ ಮನವಿ ಮಾಡಲು ಸಚಿವರು, ಸಂಸದರು, ಶಾಸಕರೊಂದಿಗೆ ಸಭೆ ನಡೆಸಲಾಯಿತು ಎಂದು ಸಿಎಂ ತಿಳಿಸಿದರು.

**ಪ್ರಮುಖ ಸುದ್ದಿ**

## ಮಾದಿಗ ಸಮುದಾಯದ ಆಸ್ತಿ ಉಳಿವಿಗಾಗಿ ಹೋರಾಟ: ಸಂಸದ ಗೋವಿಂದಕಾರಜೋಳ ಭೇಟಿ ಚರ್ಚೆ

# ಆದೇಶ ನೀಡಲು ಡಿಸಿಗೆ ಸೂಚನೆ: ಧರಣಿ ಅಂತ್ಯಗೊಳಿಸಲು ಮನವಿ

» **ಚಳ್ಳಕೆರೆ**

ಮಾದಿಗ ಸಮುದಾಯದ ಆಸ್ತಿಯನ್ನು ಉಳಿಸಿಕೊಡುವಂತೆ ಒತ್ತಾಯಿಸಿ ನಡೆಸುತ್ತಿರುವ ಧರಣಿ ಸ್ಥಳಕ್ಕೆ ಶನಿವಾರ ಲೋಕಸಭಾ ಸದಸ್ಯ ಗೋವಿಂದ ಎಂ.ಕಾರಜೋಳ ಭೇಟಿ ನೀಡಿದ್ದರು.

ಈ ಸಂದರ್ಭದಲ್ಲಿ ಎಂ.ಶಿವಮೂರ್ತಿ ಮಾತನಾಡಿ, ಕಳೆದ 1962ರಲ್ಲೇ ಬೆಂಗಳೂರು ರಸ್ತೆಯ ಈದ್ಗಾ ಮೈದಾನದಲ್ಲಿರುವ ಸುಮಾರು 30ಗುಂಟೆ ಜಾಗ ಮಾದಿಗ ಸಮುದಾಯದ ಚರ್ಮ ಹದಮಾಡಲು, ಮಾರಾಟ ಮಾಡಲು, ಚರ್ಮಕೈಗಾಕೆಗಾಗಿ ನೀಡಿದ ಈ ಬಗ್ಗೆ ಎಲ್ಲಾ ದಾಖಲಾತಿಗಳು ಇದ್ದು, ಈ ಹಿಂದೆಯೇ ಪುರಸಭೆಗೆ ಕಂದಾಯಾವನ್ನು ಪಾವತಿ ಮಾಡಲಾಗಿದೆ. ಆದರೆ, ಕಳೆದ ವರ್ಷ ಇದಕ್ಕೆ ಹೊಂದಿಕೊಂಡಂತೆ ಇರುವ ಅನ್ಯಕೋಮಿನ ಜನರು ನಗರಸಭೆಗೆ ಅರ್ಜಿ ನೀಡಿ ನಮಗೆ ನೀಡುವಂತೆ ವಿನಂತಿಸಿದ್ದಾರೆ. ಈ ಬಗ್ಗೆ ಅವರೇ ನ್ಯಾಯಾಲಯಕ್ಕೆ ಮೊರೆಹೋಗಿದ್ದಾರೆ, ಈ ಹಿನ್ನೆಲೆಯಲ್ಲಿ ನಗರಸಭೆ ಆಡಳಿತ ಮಾದಿಗ ಸಮುದಾಯಕ್ಕೆ ಯಾವುದೇ ರೀತಿಯ ದಾಖಲಾತಿ ನೀಡದೆ ವಿಳಂಬ ನೀತಿ ಅನುಸರಿಸುತ್ತಿದೆ. ನಮ್ಮ ಪೂರ್ವಜನರು ಈ ಜಾಗ ಪಡೆಯಲು ಸುಧೀರ್ಘ ಕಾಲ ಹೋರಾಟ ನಡೆಸಿದ್ದಾರೆ. ಅನ್ಯಕೋಮಿನವರಿಗೆ ಯಾವುದೇ ದಾಖಲಾತಿ ಇಲ್ಲದೆ ಇದ್ದರೂ ನಗರಸಭೆ ಮಾತ್ರ ಈ ಬಗ್ಗೆ ಕಾಯೋನ್ಮುಖರಾಗರೇ ಇರುವುದು ಸಮುದಾಯಕ್ಕೆ ನೋವು ತಂದಿದೆ ಎಂದರು.



ಸಂಸದ ಗೋವಿಂದ ಎಂ.ಕಾರಜೋಳ ಕೂಡಲೇ ಜಿಲ್ಲಾಧಿಕಾರಿ ಟಿ.ವೆಂಕಟೇಶ್‌ರವರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಪ್ರಸ್ತುತ ಸಮಸ್ಯೆಯ ಬಗ್ಗೆ ವಿಚಾರಣೆ ನಡೆಸಿದರು. ಈ ಸಂದರ್ಭದಲ್ಲಿ ಆದಾರವಿಲ್ಲದ ಅರ್ಜಿಯನ್ನು ಪಡೆದು ಸುಮ್ಮನಿದ್ದರೆ ಹೇಗೆ, ಮೂಲಖಾತೆದಾರರಿಗೆ ದಾಖಲೆ ನೀಡಲು ಹಿಂದೇಟು ಹಾಕಲು ಕಾರಣವೇನು, ನ್ಯಾಯಾಲಯಕ್ಕೆ ಹೋದರೂ ಯಾವುದೇ ಆದೇಶವಿಲ್ಲ, ಕಳೆದ ಎರಡು ದಿನಗಳಿಂದ ಧರಣಿ ನಡೆಸುತ್ತಿದ್ದಾರೆ. ಅವರ ಸಮಸ್ಯೆಗೆ ಸ್ಪಂದಿಸಬೇಕಿರುವುದು ಜಿಲ್ಲಾಡಳಿತದ ಕರ್ತವ್ಯ. ಕೂಡಲೇ ಅವರಿಗೆ ದಾಖಲಾತಿ ನೀಡುವ ವ್ಯವಸ್ಥೆ ಮಾಡಬೇಕು, ಈ ಸಮಸ್ಯೆಯನ್ನು ಇಂದೇ ಬಗೆಹರಿಸಿ ಎಂದರು.

ಜಿಲ್ಲಾಧಿಕಾರಿಗಳು ಕೂಡಲೇ ಮಾಹಿತಿ ನೀಡಿ, ಈ ಬಗ್ಗೆ ಈಗಾಗಲೇ ಚರ್ಚೆ ನಡೆಸಿದ್ದು, ಸೋಮವಾರ ಸಂಜೆ 5ರೊಳಗೆ ದಾಖಲಾತಿ ನೀಡುವ ಭರವಸೆ ನೀಡಿದರು. ಜಿಲ್ಲಾಯೋಜನಾಧಿಕಾರಿ ಮಹೇಂದ್ರಕುಮಾರ್, ಕಚೇರಿ ವ್ಯವಸ್ಥಾಪಕ ಲಿಂಗರಾಜು, ಸಮುದಾಯದ ಅಧಿಕಾರಿ ಭೂತಯ್ಯ ಇದ್ದರು.

ಬಿಜೆಪಿ ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಎಸ್ಸಿಮೋರ್ಚಾ ತಾಲ್ಲೂಕು ಅಧ್ಯಕ್ಷ ಹೊಟ್ಟೆಪ್ಪನಹಳ್ಳಿಕಾಂತರಾಜು, ಜಿಲ್ಲಾ ಮಾದಿಗದಂಡೋರ ಅಧ್ಯಕ್ಷ ದ್ಯಾವರನಹಳ್ಳಿತಿಪ್ಪೇಸ್ವಾಮಿ, ಭೀಮಣ್ಣ, ಚನ್ನಿಗರಾಯ, ಟಿ.ಜಯಣ್ಣ, ಮೈತ್ರಿದ್ಯಾಮಣ್ಣ, ಚಂದ್ರು, ಎಂ.ಇಂದ್ರೇಶ್, ಚನ್ನಗಾನಹಳ್ಳಿಮಲ್ಲೇಶ್, ದಯಾನಂದಮೂರ್ತಿ, ಬಿಜೆಪಿ ಮುಖಂಡರಾದಬಾಳೆಮಂಡಿರಾಮದಾಸ್, ಟಿ.ಮಂಜುನಾಥ, ಡಿ.ಎಂ.ತಿಪ್ಪೇಸ್ವಾಮಿ, ಸಿ.ಎಸ್.ಪ್ರಸಾದ್, ಪಾಲಯ್ಯ ಮುಂತಾದವರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಇಂದು ಕರೇಕಲ್ ಕೆರೆ ಅಂಗಳದಲ್ಲಿ ಗ್ರಾಮ ದೇವರುಗಳ ಸಮಕ್ಷಮದಲ್ಲಿ ಪೂಜಾ ಕಾರ್ಯ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳ ನಂತರ ಚಳ್ಳಕೆರೆ ನಗರದ ಜೀವನಾಡಿಯಾದ ಕರೇಕಲ್ ಕೆರೆ ತುಂಬಿ ಹರಿಯುತ್ತಿದ್ದು, ನಗರದಲ್ಲೆಲ್ಲಾ ಸಂತೋಷದ ವಾತಾವಣ ಉಂಟಾಗಿದೆ. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಈಗಾಗಲೇ ತುಂಬಿದ ಕೆರೆಗೆ ಬಾಗಿನವನ್ನು ಸಮರ್ಪಿಸಿದ್ದಾರೆ. ನಗರದ ಗ್ರಾಮ ದೇವರುಗಳಾದ, ವೀರಭದ್ರಸ್ವಾಮಿ, ಚಳ್ಳಕೆರೆಯಮ್ಮ ಮತ್ತು ಉಡಸಲಮ್ಮ ದೇವರುಗಳನ್ನು ಸೋಮವಾರ ಕರೇಕಲ್ ಕೆರೆ ಕೋಡಿಪ್ರದೇಶಕ್ಕೆ ಭವ್ಯವಾದ ಮೆರವಣಿಗೆ ಮೂಲಕ ಕರೆದ್ಯೊಯ್ದು ತುಂಬಿದ ಕೆರೆಗೆ ಗ್ರಾಮ ದೇವರುಗಳ ಸಮಕ್ಷಮದಲ್ಲಿ ವಿಶೇಷ ಪೂಜೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಚಳ್ಳಕೆರೆಯಮ್ಮ ದೇವಸ್ಥಾನದ ಆಡಳಿತಮಂಡಳಿ ನಿರ್ದೇಶಕ ಪಿ.ತಿಪ್ಪೇಸ್ವಾಮಿ ಮಾಹಿತಿ ನೀಡಿದ್ದಾರೆ. ಧರ್ಮದರ್ಶಿ ಗೌಡ್ರರಾಮಣ್ಣ ಹಾಗೂ ಮೂರು ದೇವಸ್ಥಾನಗಳ ಆಡಳಿತಮಂಡಳಿಯ ಎಲ್ಲಾ ನಿರ್ದೇಶಕರು, ಪೂಜಾರರು ಹಾಗೂ ನೂರಾರು ಭಕ್ತರು ಈ ಪೂಜಾ ಕಾರ್ಯದಲ್ಲಿ ಭಾಗವಹಿಸುವರು. ಬೆಳಗ್ಗೆ ಸುಮಾರು 10ಕ್ಕೆ ಮೂರು ದೇವರುಗಳನ್ನು ಮೆರವಣಿಗೆಯಲ್ಲಿ ಕರೆದ್ಯೊಯಲಾಗುವುದು. ಬಹಳ ವರ್ಷಗಳ ನಂತರ ಗ್ರಾಮ ದೇವರುಗಳಾ ಸಮಕ್ಷಮದಲ್ಲಿ ಕರೇಕಲ್ ಕೆರೆ ಪೂಜಾ ಕಾರ್ಯ ನೆರವೇರುತ್ತಿದ್ದಯ ಎಲ್ಲರೂ ಆತುರದಿಮದ ಪೂಜಾ ಕಾರ್ಯವನ್ನು ಕಣ್ತುಂಬಿಕೊಳ್ಳಲು ಕಾಯುತ್ತಿದ್ದಾರೆ. ಪ್ರತಿವರ್ಷ ದಸರಾ ಹಬ್ಬದ ಸಂದರ್ಭದಲ್ಲಿ ಮಾತ್ರ ಬಳ್ಳಾರಿ ರಸ್ತೆಯ ಬನ್ನಿಮುಡಿಯುವ ಪ್ರದೇಶಕ್ಕೆ ದೇವರುಗಳನ್ನು ಮೆರವಣಿಗೆ ಮೂಲಕ ಕರೆದ್ಯೊಯಲಾಗುತ್ತಿತ್ತು. ಈ ಬಾರಿ ವಿಶೇಷವಾಗಿ ಕೆರೆ ಪೂಜೆ ಕಾರ್ಯದಲ್ಲಿ ಮೂರು ದೇವರುಗಳ ಸಮಾಗಮ ನಡೆಯಲಿದೆ.

## ಅಕ್ರಮ ಮದ್ಯ ಮಾರಾಟ: ಓರ್ವನ ವಿರುದ್ದ ಪ್ರಕರಣ ದಾಖಲು

» **ಚಳ್ಳಕೆರೆ**

ಕಳೆದ ಹಲವಾರು ತಿಂಗಳುಗಳಿಂದ ಪೊಲೀಸ್ ಇಲಾಖೆ ಅಕ್ರಮ ಮದ್ಯಮಾರಾಟ ಮಾಡುವವರನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸಕಾಲಿಕ ಕ್ರಮಕೈಗೊಳ್ಳುತ್ತಿದ್ದು, ಪ್ರಕರಣಗಳನ್ನು ಸಹ ದಾಖಲಿಸಿದ್ಧಾರೆ. ವೆಂಕಟೇಶ್ವರನಗರದ ನಾಯಕನಹಟ್ಟಿ ರಸ್ತೆಯ ರಾಷ್ಟ್ರೀಯ ಹೆದ್ದಾರಿ ಪಕ್ಕದ ಅಂಗಡಿಯಲ್ಲಿ ಅನುಮತಿ ಇಲ್ಲದೆ ಅಕ್ರಮ ಮದ್ಯಮಾರಾಟವನ್ನು ಮಾಡುತ್ತಿದ್ದು, ಈ ಬಗ್ಗೆ ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ತೆರಳಿ ಶಿವಣ್ಣ(43) ಎಂಬುವವನ ವಿರುದ್ದ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ. ಪೇದೆ ಮಂಜುನಾಥ, ಶ್ರೀಧರ ದಾಳಿಯಲ್ಲಿ ಭಾಗವಹಿಸಿದ್ದು, ಪಿಎಸ್ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿದ್ಧಾರೆ.

**ಜೂಜಾಟ ಪ್ರಕರಣ :** ನಗರದ ರಾಮಕೃಷ್ಣ ಚಿತ್ರಮಂದಿರದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಪಿ.ಬಾಬು(35) ಎಂಬ ವ್ಯಕ್ತಿ ಮಟ್ಕಾಚೀಟಿ ಬರೆಯುತ್ತಿದ್ದು, ಅವನಿಂದ 1050 ನಗದು ಹಣ ವಶಪಡಿಸಿಕೊಳ್ಳಲಾಗಿದೆ. ಪೊಲೀಸ್ ಇಲಾಖೆಗೆ ಬಂದ ಖಚಿತ ಮಾಹಿತಿ ಮೇರೆಗೆ ದಾಳಿನಡೆಸಿದ್ದು, ಪಿಎಸ್ಐ ಜೆ.ಶಿವರಾಜ್ ಪ್ರಕರಣದಾಖಲಿಸಿದ್ಧಾರೆ.

## 29 ರಂದು ಜಿಲ್ಲಾ ಮಟ್ಟದ ನಿವೃತ್ತ ನೌಕರರ ಸಭೆ

» **ದಾವಣಗೆರೆ**

ಜಿಲ್ಲೆಯಲ್ಲಿ 1–7–2022 ರಿಂದ 31–07–2024 ಅವಧಿಯ ನಿವೃತ್ತ ನೌಕರರ ಬೃಹತ್ ಸಭೆಯನ್ನು ಕರ್ನಾಟಕ ನಿವೃತ್ತ ನೌಕರರ ವೇದಿಕೆಯ ಅಡಿಯಲ್ಲಿ ದಿ.29 ರ ಮಂಗಳವಾರ 10–15 ಕ್ಕೆ ನಗರದ ಜಿಲ್ಲಾ ಗುರು ಭವನ ಎ.ವಿ.ಕೆ.ಕಾಲೇಜ ರಸ್ತೆ ಇಲ್ಲಿ ಕರೆಯಲಾಗಿದೆ. ಸಭೆಯ ಅಧ್ಯಕ್ಷತೆಯನ್ನು ರಾಜ್ಯ ಮಹಾ ಪ್ರಧಾನ ಸಂಚಾಲಕರಾದ ಎಮ್.ಪಿ.ಎಮ್. ಷಣ್ಮುಖಯ್ಯ ಇವರು ವಹಿಸಲಿದ್ದು ರಾಜ್ಯ ಸಂಚಾಲಕ ಅಶೋಕ. ಎಮ್. ಸಜ್ಜನ. ಗುರು ತಿಗಡಿ.ಶಂಕ್ರಪ್ಪ ಲಮಾಣಿ ಎಸ್.ಜಿ. ಬಿಸೆರೊಟ್ಟಿ ವಿಜಯ ಅಣಜಿ ಕೆ.ಶಿವಶಂಕರ ಕೆ.ಎಚ್.ಮಂಜುನಾಥ ಆನಂದಪ್ಪ ಉಪಸ್ಥಿತರಿರುವರು. ಜಿಲ್ಲಾ ಪ್ರಧಾನ ಸಂಚಾಲಕರಾದ ಹೊರಕೇರಿ.ಎಮ್.ಎ.ಡಿ.ಕೃಷ್ಣಪ್ಪ ಹಾಗೂ ಇನ್ನುಳಿದ ಜಿಲ್ಲಾ ಹಾಗೂ ತಾಲೂಕಾ ಸಂಚಾಲಕರು ಆಗಮಿ ಸಲಿದ್ದಾರೆ.

## ಫಾಸ್ಟ್ ನ್ಯೂಸ್

### ಯೋಗಗುರು ಡಾ.ಎನ್.ಪರಶುರಾಮಪ್ಪಗೆ 'ಕರ್ನಾಟಕ ಮುಕುಟಮಣಿ'

» **ದಾವಣಗೆರೆ**

ನಗರದ ಯೋಗಗುರು ಡಾ.ಎನ್.ಪರಶುರಾಮಪ್ಪ ಅವರಿಗೆ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯಿಂದ ಕೊಡಮಾಡುವ 'ಕರ್ನಾಟಕ ಮುಕುಟಮಣಿ' ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಿದೆ.ಕನ್ನಡ ನಾಡು–ನುಡಿ, ಕಲೆ, ಸಾಹಿತ್ಯ, ಸಂಸ್ಕೃತಿ, ಜಾನಪದ, ಸಮಾಜಸೇವೆ ಹೀಗೆ ಎಲ್ಲಾ ಆಯಾಮಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವುದನ್ನು ಗುರುತಿಸಿ ನ.1ರಂದು ನಗರದ ಚನ್ನಗಿರಿ ವಿರೂಪಾಕ್ಷಪ್ಪ ಧರ್ಮಶಾಲಾಕಲ್ಯಾಣಮಂಟಪದಲ್ಲಿಆಯೋಜಿಸಿದ್ದ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ದಾವಣಗೆರೆ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯು ಕರ್ನಾಟಕ ರಾಜ್ಯದ 77ನೇ ರಾಜ್ಯೋತ್ಸವದ ಈ ಸಂದರ್ಭದಲ್ಲಿ ಡಾ.ಎನ್.ಪರಶುರಾಮಪ್ಪ ಅವರಿಗೆ 'ಕರ್ನಾಟಕ ಮುಕುಟಮಣಿ'ಪ್ರಶಸ್ತಿಪ್ರದಾನಮಾಡಲಾಗುತ್ತದೆ.ಈ ಪ್ರಶಸ್ತಿಗೆ ಭಾಜನರಾದ ಡಾ.ಎನ್.ಪರಶುರಾಮಪ್ಪ ಅವರಿಗೆ ದಾವಣಗೆರೆ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ವಾಸುದೇವ್ ರಾಯ್ಕರ್, ದಾವಣಗೆರೆ ಎಎಸ್‌ಎಸ್ ಯೋಗ ಫೆಡರೇಷನ್ ಅಧ್ಯಕ್ಷ ರುದ್ರಪ್ಪ, ಉಪಾಧ್ಯಕ್ಷ ಗೋಪಾಲ್ ರಾವ್, ಖಜಾಂಚಿ ಎಸ್.ರಾಜಶೇಖರ್, ನಿರ್ದೇಶಕರಾದ ಜೆ.ಎಸ್.ವೀರೇಶ್, ಎಂ.ವೈ.ಸತೀಶ್, ಅಜ್ಜಯ್ಯ, ರಾಘವೇಂದ್ರ ಚೌಹಣ್, ರಂಗಪ್ಪ, ನಾಗರಾಜ್, ಸಾವಿತ್ರಮ್ಮ, ಹಾಗೂ ಪತ್ರಕರ್ತ ಎ.ಎನ್.ನಿಂಗಪ್ಪ, ಯೋಗ ವಿದ್ಯಾರ್ಥಿಗಳು, ವಿವಿಧ ಸಂಘಟನೆಗಳ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ

### ಕಾಂಗ್ರೆಸ್‌ನ ದುರಾಡಳಿತ ಮತ್ತು ದೌರ್ಜನಕ್ಕೆ ಜನರು ತಕ್ಕ ಉತ್ತರ ಕೊಡುತ್ತಾರೆ: ಬಸವರಾಜ ಬೊಮ್ಮಾಯಿ

» **ಹಾವೇರಿ(ಶಿಗ್ಗಾವಿ)**

ಕಳೆದ ಒಂದೂವರೆ ವರ್ಷದ ಕಾಂಗ್ರೆಸ್ ನ ದುರಾಡಳಿತ ಮತ್ತು ದೌರ್ಜನಕ್ಕೆ ಈ ಉಪ ಚುನಾವಣೆಯಲ್ಲಿ ಜನರು ತಕ್ಕ ಉತ್ತರ ಕೊಡುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ಶಿಗ್ಗಾವಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಗ್ಯಾರೆಂಟಿ ಗಳು ಕೈ ಹಿಡಿಯುತ್ತವೆ ಎಂದು ಕಾಂಗ್ರೆಸ್ ನವರು ಕನಸು ಕಾಣುತ್ತಿದ್ದಾರೆ. ಅವರ ಕನಸು ನನಸಾಗುವುದಿಲ್ಲ. ಕಳೆದ ಲೋಕಸಭೆ ಚುನಾವಣೆಯಲ್ಲಿ ನಾನು ಹಾವೇರಿ ಗದಗ ಜಿಲ್ಲೆಯ ಕಡೆಗೆ ಹೆಚ್ಚಿನ ಗಮನ ಹರಿಸಿದ್ದೆ, ಆಗ ಸ್ವಲ್ಪ ವ್ಯತ್ಯಾಸ ಆಗಿದೆ. ಆದರೆ, ನಮ್ಮ ಕಾರ್ಯಕರ್ತರಿಗೆ ಈಗಾಗಲೇ ಅದರ ಅರಿವಾಗಿದೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಯಾವ ರೀತಿ ಜನರು ಬೆಂಬಲ ಕೊಟ್ಟಿದ್ದರೋ ಅದೇ ರೀತಿ ಈಗ ಜನ ಬೆಂಬಲ ಸಿಗಲಿದೆ. ನಮ್ಮ ಕಾರ್ಯಕರ್ತರು ಎಲ್ಲ ರೀತಿಯ ಸಿದ್ದತೆ ಮಾಡಿಕೊಂಡಿದ್ದಾರೆ ಎಂದರು. ಕಾಂಗ್ರೆಸ್ ನವರು ರೌಡಿ ಶೀಟರ್ ಗೆ ಟಿಕೆಟ್ ಕೊಟ್ಟಿದ್ದಾರೆ ಎಂದು ಕಾಂಗ್ರೆಸ್ ನವರೇ ಆರೋಪ ಮಾಡಿದ್ದಾರೆ. ಈ ಬಗ್ಗೆ ಕಾಂಗ್ರೆಸ್ ನಾಯಕರು ಸ್ಪಷ್ಟೀಕರಣ ನೀಡಬೇಕು ಎಂದರು. ಸಚಿವ ಜಮೀರ್ ಅಹಮದ್ ಅವರ ಸಲಾವಿನ ಕುರಿತು ಕೇಳಿದ ಪ್ರಶ್ನೆಗೆ ಅವರ ಸವಾಲು ಹಾಸ್ಯಾಸ್ಪದವಾಗಿದ್ದು, ಸತ್ಯಕ್ಕೆ ದೂರವಾಗಿದೆ ಎಂದರು. ಶಿಗ್ಗಾವಿ ಕ್ಷೇತ್ರದಲ್ಲಿ ಜಾತಿ ಲೆಕ್ಕಾಚಾರ ನಡೆಯುತ್ತಿರುವ ಕುರಿತು ಕೇಳಿದ ಪ್ರಶ್ನೆಗೆ ನಾವೆಲ್ಲರೂ ಒಕ್ಕಟ್ಟಾಗಿದ್ದೇವೆ. ಎಲ್ಲ ಸಮುದಾಯದವರು ನಮಗೆ ಬೆಂಬಲ ಸೂಚಿಸಿದ್ದಾರೆ. ಈ ಚುನಾಚಣೆಯಲ್ಲಿ ನನಗಿಂತ ಹೆಚ್ಚು ಬೆಂಬಲ ಭರತ್ ಬೊಮ್ಮಾಯಿಗೆ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಾಂಗ್ರೆಸ್ ಬಂಡಾಯ ಅಭ್ಯರ್ಥಿ ಅಜ್ಜಂಪೀರ್ ಖಾದ್ರಿಯವರ ಮನವೊಲಿಕೆಯಿಂದ ನಮಗೇನು ಪರಿಣಾಮ ಬೀರುವುದಿಲ್ಲ. ಅದು ಕಾಂಗ್ರೆಸ್ ಗೆ ಸಂಬಂಧಿಸಿದ ವಿಚಾರ ಎಂದರು. ಕಾಂಗ್ರೆಸ್ ನವರು ಹೋಬಳಿಗೊಬ್ಬ ಸಚಿವರು ಬರಲಿದ್ದಾರೆ ಎಂಬ ಪ್ರಶ್ನೆಗೆ ಬರಲಿ ಅವರಿಗೆ ಸ್ವಾಗತ ಎಂದರು.

### ವಾಲ್ಮೀಕಿ ನಿಗಮ: ವಿವಿಧ ಯೋಜನೆಗಳಿಗೆ ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿಗೆ ಪರಿಶಿಷ್ಟ ಪಂಗಡ ಜನರ ಆರ್ಥಿಕ ಅಭಿವೃದ್ಧಿಗಾಗಿ ನಿಗಮದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಪರಿಶಿಷ್ಟ ಪಂಗಡದ ಫಲಾಪೇಕ್ಷಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ನವೆಂಬರ್ 23 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಪಂಗಡ ಜನರ ಆರ್ಥಿಕ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ, ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ (ಬ್ಯಾಂಕ್ ಸಹಯೋಗದೊಂದಿಗೆ), ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋಕ್ರೆಡಿಟ್ ಯೋಜನೆ ಹಾಗೂ ಗಂಗಾ ಕಲ್ಯಾಣ ಯೋಜನೆಗಳಿಗೆ ನಿಗಮದ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಪಂಗಡದ ಸಮುದಾಯದವರು ಸೇವಾಸಿಂಧು ಪೋರ್ಟಲ್ https://sevsindu.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಸರಸ್ವತಿಪುರಂ ಮುಖ್ಯ ರಸ್ತೆಯಲ್ಲಿನ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರನ್ನು ಅಥವಾ ಕಚೇರಿಯ ದೂ. ಸಂಖ್ಯೆ 08194–221055 ಗೆ ಸಂಪರ್ಕಿಸಬಹುದು

## ಮಾದಿಗ ಜನಾಂಗದವರಿಗೆ ಶಾಸಕ ಬಿ.ಜಿ.ಗೋವಿಂದಪ್ಪ ಭರವಸೆ

# ಒಳ ಮೀಸಲಾತಿ ಜಾರಿಗೆ ನನ್ನ ಬೆಂಬಲವಿದೆ

» **ಹೊಸದುರ್ಗ**

ಮಾದಿಗ ಜನಾಂಗದವರು ಹಲವಾರು ವರ್ಷಗಳಿಂದ ಪ್ರತ್ಯೇಕ ಮೀಸಲಾತಿಗಾಗಿ ಹೋರಾಟ ನಡೆಸಿಕೊಂಡು ಬಂದಿದ್ದಾರೆ. ಸುಪ್ರೀಂ ಕೋರ್ಟ್ ಕೂಡ ಒಳ ಮೀಸಲಾತಿ ಕಲ್ಪಿಸಲು ಅಸ್ತು ಎಂದಿದ್ದು, ಮಾದಿಗ ಜನಾಂಗಕ್ಕೆ ಒಳ ಮೀಸಲಾತಿ ಜಾರಿಗೆ ನನ್ನ ಸಂಪೂಣ9 ಬೆಂಬಲವಿದೆ ಎಂದು ಶಾಸಕ, ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಸುಪ್ರೀಂ ಕೋ□□9 ಆದೇಶದಂತೆ ಶೀಘ್ರವೇ ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿಗೊಳಿಸಬೇಕೆಂದು ಒತ್ತಾಯಿಸಿ, ಶನಿವಾರ ತಾಲೂಕಿನ ಮಲ್ಲೇನಹಳ್ಳಿ ಗೇಟ್ ನಿಂದ ಬೆಲಗೂರು ಶಾಸಕರ ಮನೆವರೆಗೆ ಪಾದಯಾತ್ರೆ ನಡೆಯಿತು. ಮಾದಿಗ ಜನಾಂಗದ ಮನವಿ ಸ್ವೀಕರಿಸಿ ಅವರು ಮಾತನಾಡಿದರು.

ಮಾದಿಗ ಜನಾಂಗವು ಸುಮಾರು ವಷ9ಗಳಿಂದ ಪ್ರತ್ಯೇಕ ಮೀಸಲಾತಿ ವಿಷಯಕ್ಕೆ ಹೋರಾಟ ಮಾಡುತ್ತಿರುವುದು ನಮಗೆ ತಿಳಿದ ವಿಷಯವಾಗಿದ್ದು, ಈ ಹಿಂದೆ ಚುನಾವಣೆಯ ಸಂದಭ9ದಲ್ಲಿ ನಮ್ಮ ಸಕಾ9ರ ಅಧಿಕಾರಕ್ಕೆ ಬಂದ ತಕ್ಷಣ ಮಾದಿಗರಿಗೆ ಒಳ ಮೀಸಲಾತಿ ಜಾರಿಗೆ ತರುವುದಾಗಿ ಹೇಳಿತ್ತು. ಅದರಂತೆಯೇ, ಸುಪ್ರೀಂ ಕೋ□□9 ಕೂಡ ಪರಿಶಿಷ್ಠ ಜಾತಿಯವರಿಗೆ ಮೀಸಲಾತಿ ವರ್ಗೀಕರಣ ಆಯಾ ರಾಜ್ಯಗಳು ಮಾಡಬಹುದೆಂದು ಆದೇಶ ಮಾಡಿದೆ ಎಂದರು.ಕಾಂಗ್ರೆಸ್ ಪಕ್ಷದೊಳಗೆ ಏನೇಗೊಂದಲಗಳು ಇದ್ದರೂ, ಅದಕ್ಕೆ ಕಿವಿಗೊಡದೆ ಕೊಟ್ಟ ಮಾತಿನಂತೆ ಜಾರಿ ಮಾಡಬೇಕು. ಶತಮಾನಗಳಿಂದ ಎಲ್ಲಾ ವಿಧದಲ್ಲಿಯೂ ಮೀಸಲಾತಿಯ ಅವಕಾಶ ಸಿಗದೆ ನೊಂದಿದ್ದಾರೆ.

ನೀವು ನ್ಯಾಯ ಕೇಳುವುದರಲ್ಲಿ ತಪ್ಪಿಲ್ಲ. ಸಕಾ9ರದ ಮುಖ್ಯಮಂತ್ರಿ ಸಿದ್ದರಾಮಯ್ಯನವರೊಂದಿಗೆ ಮತ್ತು ಸದನದಲ್ಲಿ ಬೆಂಬಲಿಸುವುದಾಗಿ ಭರವಸೆ ನೀಡಿದರು.



ಮಾದಿಗ ಸಮಾಜದ ಮುಖಂಡರಾದ ಹೆಗ್ಗೆರೆ ಶಂಕರಪ್ಪ ಮಾತನಾಡಿ, ಶತಶತಮಾನಗಳಿಂದ ಮಾದಿಗ ಸಮಾಜ ಶೋಷಣೆಗೆ ಒಳಗಾಗಿದ್ದು, ಸಂವಿಧಾನ ಮತ್ತು ಸಕಾ9ರ ನಿಗದಿಗೊಳಿಸಿರುವ ಮೀಸಲಾತಿಯಲ್ಲಿ 101 ಜಾತಿಯವರನ್ನು ಸೇರಿಸಿದೆ. ಅಸ್ಪೃಶ್ಯರಾದ ಮಾದಿಗ ಜನಾಂಗಕ್ಕೆ ಮೀಸಲಾತಿ ಮರೀಚಿಕೆಯಾಗಿದ್ದು, ನಮ್ಮ ಸಮಾಜ ಎಲ್ಲಾ ಕ್ಷೇತ್ರಗಳಲ್ಲೂ ಹಿಂದುಳಿದಿದೆ. ಪರಿಶಿಷ್ಠ ಜಾತಿಯವರಿಗೆ ಮೀಸಲಾತಿ ವರ್ಗೀಕರಣ ಮಾಡಬೇಕೆಂದು ಸುಪ್ರೀಂ ಕೋ□□9ಆದೇಶ ಮಾಡಿದರೂ ರಾಜ್ಯ ಸರ್ಕಾರ ಜಾರಿಗೊಳಿಸುವಲ್ಲಿ ವಿಳಂಬ ಧೋರಣೆ ತೋರುತ್ತಿರುವುದು ಸರಿಯಲ್ಲ. ಮೀಸಲಾತಿಯಲ್ಲಿ ವಂಚಿತವಾಗಿ ನೊಂದು–ಬೆಂದಿರುವ ಮಾದಿಗ ಸಮೂದಾಯಕ್ಕೆ ಒಳ ಮೀಸಲಾತಿ ಜಾರಿಗೊಳಿಸಿ ಸಕಾ9ರ ಸಮಾಜದ ಪ್ರೀತಿ ಉಳಿಸಿಕೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ಹೋರಾಟ ಗಳು ಬಹಳ ಉಗ್ರವಾಗಿರುತ್ತವೆ ಎಂದು ಎಚ್ಚರಿಸಿದರು.

ಚಿತ್ರದುಗ9 ಜಿಲ್ಲಾ ಮಾದಿಗ ಮಹಾಸಭಾ ಮುಖ್ಯಸ್ಥ ಪ್ರಕಾಶ್ ಮೂರ್ತಿ, ಮುಖಂಡರಾದ ದೊಡ್ಡಘಟ್ಟ ಎಂ.ಲಕ್ಷ್ಮಣ್, ನಾಕೀಕೆರೆ ತಿಪ್ಪಯ್ಯ, ಇಟಿಗೆಹಳ್ಳಿ ಆರ್. ರಾಜಪ್ಪ, ಕೈನಡು ಚಂದ್ರಪ್ಪ, ಪೀಲಾಪುರ ಆರ್.ಕಂಠೇಶ್, ಲಕ್ಕಿಹಳ್ಳಿ ಮುದ್ದಪ್ಪ, ಶ್ರೀರಾಂಪುರ ಕೃಷ್ಣಮೂತಿ9, ಶಿವಣ್ಣ, ದೇವಿಗೆರೆ ಮಲ್ಲಿಕಾಜು9ನ್, ಬೆಲಗೂರು ರಾಘವೇಂದ್ರ, ಮಳಲಿ ಶೇಖರಪ್ಪ, ಆದ್ರಿಕಟ್ಟೆ ಕುಮಾರಪ್ಪ, ಎಂ.ಜಿ.ದಿಬ್ಬ ಕೃಷ್ಣಮೂತಿ9, ವಕೀಲ ಜ್ಞಾನೇಶ್, ದ.ಸಂ.ಸಂಚಾಲಕ ಗಿರೀಶ್, ಸಹಾ ಸಂಚಾಲಕ ಕರ್ಣ, ಕರ್ನಾಟಕ ಭೀಮ್ ಸೇನೆ ತಾಲ್ಲೂಕು ಅಧ್ಯಕ್ಷ ರವಿಕುಮಾರ್, ಕಬ್ಬಳ ಪ್ರದೀಪ್, ದೊಡ್ಡಘಟ್ಟ ತಿಪ್ಪಯ್ಯ, ನಾಗಪ್ಪ, ಎಂ.ಜಿ.ದಿಬ್ಬ ರಂಗಪ್ಪ, ಕಾರೇಹಳ್ಳಿ ಮಂಜು, ನಾಕೀಕೆರೆ ಹನುಮಂತಪ್ಪ, ಮೂಡಲಗಿರಿ, ಜಂತಿಕೊಳಲು ಪ್ರಸನ್ನ, ಮಲ್ಲಪ್ಪನಹಳ್ಳಿ ಬಸವರಾಜ್, ದೊಡ್ಡಘಟ್ಟ ರಾಮಚಂದ್ರ, ಕಂಚೀಪುರ ದುಗೇ9ಶ್, ಕಪ್ಪಗೆರೆ ನಾಗರಾಜ್, ಮತ್ತೋಡು ಮೂಡಲಗಿರಿಯಪ್ಪ, ಕಿಟ್ಟದಹಳ್ಳಿ ಗಿರೀಶ್, ಚಿತ್ರದುಗ9ದ ಶಿವರಾಜ್, ವಿಜಯ ಕುಮಾರ್ ಹರೀಯನಹಳ್ಳಿ, ಲೋಕೇಶ್, ಜೋಡಿ ಶ್ರೀರಂಗಪುರ ರಂಗಸ್ವಾಮಿ, ಕಾಂತರಾಜು, ಗೊರವಿನಕಲ್ಲು ಪುಟ್ಟರಾಜ್ ಬಾಗೂರ ಪ್ರಕಾಶ್, ಮಣ್ಣಮ್ಮ ಮತ್ತು ಹೇಮಾವತಿ ಸೇರಿದಂತೆ ಮಾದಿಗೆ ಸಮುದಾಯದ ನೂರಾರು ಜನರು ಪಾಲ್ಗೊಂಡಿದ್ದರು

# ಮಳೆಗೆ ಕುಸಿದ ಬಿದ್ದ ಮನೆಗಳು: ಬಸವಂತಪ್ಪ ಪರಿಶೀಲನೆ





» **ದಾವಣಗೆರೆ**

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯಲ್ಲಿ ಈಚೆಗೆ ಸುರಿದ ಧಾರಾಕಾರ ಮಳೆಯಿಂದಾಗಿ ಹಾನಿಗೊಳಗಾದ ಪ್ರದೇಶಗಳಿಗೆ ಭಾನುವಾರ ಶಾಸಕ ಕೆ.ಎಸ್.ಬಸವಂತಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತಾಲೂಕಿನ ದಿಂಡದಹಳ್ಳಿ ಮತ್ತು ಕೊಗ್ಗನೂರು ಗ್ರಾಮದಲ್ಲಿ ಸುರಿದ ಮಳೆಯಿಂದ ಕುಸಿದು ಬಿದ್ದಿರುವ ಮನೆಗಳನ್ನು ಪರಿಶೀಲನೆ ನಡೆಸಿದರು. ಈಚೆಗೆ ಸುರಿದ ಮಳೆಗೆ ಕ್ಷೇತ್ರದ ಸಾಕಷ್ಟು ಗ್ರಾಮಗಳಲ್ಲಿ ಮನೆಗಳು ಭಾಗಶಃ ಹಾನಿಯಾಗಿವೆ. ಅಲ್ಲದೇ ಮೆಕ್ಕೆಜೋಳ ಸೇರಿದಂತೆ ಇನ್ನಿತರೆ ಬೆಳೆಗಳು ಕೂಡ ನಿರಂತರ ಮಳೆಗೆ ಕೊಳೆತು ಹೋಗಿವೆ. ಕೃಷಿ ಮತ್ತು ಕಂದಾಯ ಅಧಿಕಾರಿಗಳ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿ ಬೆಳೆ ಕಳೆದುಕೊಂಡ ರೈತರಿಗೆ ಮತ್ತು ಮನೆ ಕಳೆದುಕೊಂಡ ನಿರಾಶ್ರಿತರಿಗೆ ಪರಿಹಾರ ನೀಡುವ ಜೊತೆಗೆ ಮನೆಗಳನ್ನು ನಿರ್ಮಿಸಿಕೊಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ವೇಳೆ ಜೆಜೆಎಂ ಯೋಜನೆಯಡಿ ಕುಡಿಯುವ ನೀರಿನ ಪೈಪ್‌ಲೈನ್ ಕಳಪೆ ಗುಣಮಟ್ಟದಿಂದ ಕೂಡಿದೆ. ನೀರು ಬರುವುದಿಲ್ಲ ಎಂದು ಗ್ರಾಮಸ್ಥರು ಶಾಸಕರ ಬಳಿ ಸಮಸ್ಯೆ ಬಿಚ್ಚಿಟ್ಟರು. ಕಾಮಗಾರಿ ಪರಿಶೀಲಿಸಿದ ಶಾಸಕರು, ಕಳಪೆ ಕಾಮಗಾರಿ ಕಂಡು ಗುತ್ತಿಗೆದಾರರ ವಿರುದ್ಧ ಕೆಂಡಾಮಂಡಲರಾದರು. ಕೂಡಲೇ ಗುಣಮಟ್ಟದ ಕಾಮಗಾರಿ ನಡೆಸಿ ಗ್ರಾಮಸ್ಥರಿಗೆ ಸಮಪರ್ಕ ಕುಡಿಯುವ ನೀರು ಪೂರೈಸುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪರಶುರಾಮ್, ಗಣೇಶಪ್ಪ, ಹೊನ್ನೂರಪ್ಪ, ಬಸಣ್ಣ, ಶ್ರೀಕಾಂತ್, ಕೆಂಚಪ್ಪ ಹಾಗೂ ಗ್ರಾಮಸ್ಥರು ಇದ್ದರು.

ವಾಲ್ಮೀಕಿ ಜಯಂತಿ: ದಿಂಡದಹಳ್ಳಿ ಗ್ರಾಮದಲ್ಲಿ ನಡೆದ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಶಾಸಕ ಕೆ.ಎಸ್.ಬಸವಂತಪ್ಪ, ಮಹರ್ಷ ವಾಲ್ಮೀಕಿಯವರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮಕ್ಕಳಿಗೆ ಶಿಕ್ಷಣ ಕೊಡಿಸಿ ಉತ್ತಮ ಸತ್ಪ್ರಜೆಗಳನ್ನಾಗಿ ಮಾಡಬೇಕೆಂದು ಕಿವಿಮಾತು ಹೇಳಿದರು. ಈ ವೇಳೆ ಕಾಂಗ್ರೆಸ್ ಮುಖಂಡ ಮಂಜುನಾಥ್, ನಾಗರಾಜ್, ಗಣೇಶ್, ಪರಶುರಾಮ್, ಬಸಣ್ಣ ಹಾಗೂ ಸಮಾಜ ಬಾಂಧವರು ಭಾಗವಹಿಸಿದ್ದರು.

**ನಿರಾಶ್ರಿತರಲ್ಲಿ ಆತಂಕ ಬೇಡ..:** ನಿರಂತರ ಮಳೆ ಸುರಿದು ಕುಸಿದು ಬಿದ್ದಿರುವ ಮನೆಗಳಿಗೆ ಪರಿಹಾರ ಕೊಟ್ಟರೆ, ಮನೆ ಮಂಜೂರು ಆಗುವುದಿಲ್ಲ. ಮನೆ ಬೇಕೋ ಅಥವಾ ಪರಿಹಾರ ಬೇಕೋ ಎಂದು ಅಧಿಕಾರಿಗಳು ಹೇಳುತ್ತಾರೆ ನಿರಾಶ್ರಿತರು ಶಾಸಕರ ಬಳಿ ಪರಿಹಾರ ಮತ್ತು ಮನೆ ಮಂಜೂರು ಮಾಡಿಸುವಂತೆ ಮನವಿ ಮಾಡಿದರು. ಇದಕ್ಕೆ ಶಾಸಕ ಕೆ.ಎಸ್.ಬಸವಂತಪ್ಪ, ಮಳೆಯಿಂದ ಮನೆಗಳು ಹಾನಿಗೊಳಗಾದ ನಿರಾಶ್ರಿತರಿಗೆ ಸರ್ಕಾರ ಪರಿಹಾರನೂ ಕೊಡುತ್ತದೆ. ಮನೆನೂ ಮಂಜೂರು ಮಾಡುತ್ತದೆ. ಯಾವುದೇ ಕಾರಣಕ್ಕೆ ನಿರಾಶ್ರಿತರು ಆತಂಕ ಪಡಬೇಡಿ ಎಂದು ಧೈರ್ಯ ತುಂಬಿದರು.,

# ನಾಗಪ್ಪನಹಳ್ಳಿ ಗೇಟ್: ರಸ್ತೆ ಗೂಡಂಗಡಿಗಳ ತೆರವಿಗೆ ಮನವಿ



» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ನಾಗಪ್ಪನಹಳ್ಳಿಗೇಟ್ ಬಳಿ ಪ್ರತಿನಿತ್ಯ ವಾಹನ ಹಾಗೂ ಜನರ ಸಂಚಾರ ಹೆಚ್ಚಿದ್ದು, ಆಂಧ್ರಪ್ರದೇಶಕ್ಕೆ ಸಂಪರ್ಕ ಕೊಡುವ ಏಕೈಕ ಮಾರ್ಗವಾಗಿದೆ. ಆದರೆ, ಸಾರ್ವಜನಿಕ ರಸ್ತೆಯಲ್ಲಿ ಅಂಗಡಿಮುಂಗಟ್ಟುಗಳು ಯಾವುದೇ ಅನುಮತಿ ಇಲ್ಲದೆ ಕಾರ್ಯನಿರ್ವಹಿಸುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಹೆಚ್ಚು ತೊಂದರೆಯಾಗುತ್ತಿದೆ. ಕೂಡಲೇ ಅವುಗಳನ್ನು ತೆರವುಗೊಳಿಸುವಂತೆ ಸಾಮಾಜಿಕ ಹೋರಾಟಗಾರಾದ ಪಿಲ್ಲಹಳ್ಳಿ ಸಿ.ಚಿತ್ರಲಿಂಗಪ್ಪ, ಸಿ.ಚಂದ್ರಣ್ಣ ತಾಲ್ಲೂಕು ಆಡಳಿತಕ್ಕೆ ಮನವಿ ಮಾಡಿದ್ದಾರೆ. ಪಿಲ್ಲಹಳ್ಳಿಸಿ.ಚಿತ್ರಲಿಂಗಪ್ಪ ಮಾತನಾಡಿ, ಕಳೆದ 30 ವರ್ಷಗಳಿಂದ ಇಲ್ಲಿನ ಸಾರ್ವಜನಿಕ ರಸ್ತೆಯಲ್ಲಿ ಅಂಗಡಿಗಳನ್ನು ಎಲ್ಲಂದರಲ್ಲೇ ಇದ್ದು, ರಸ್ತೆಗೆ ಅಂಟಿಕೊಂಡಿವೆ. ಇದರಿಂದ ವಾಹನ ಮತ್ತು ಜನರ ಓಡಾಟಕ್ಕೆ ತೊಂದರೆಯಾಗಿದೆ. ಹಲವಾರು ಬಾರಿ ಕಾರು, ಬೈಕ್‌ಗಳು ರಭಸವಾಗಿ ಚಲಿಸಿ ಅಪಘಾತಗಳು ನಡೆದು ಪ್ರಾಣವನ್ನು ಸಹ ಕಳೆದುಕೊಂಡವರು ಇದ್ದಾರೆ. ಆದ್ದರಿಂದ ತಾಲ್ಲೂಕು ಆಡಳಿತ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರೆ. ಈ ಭಾಗದಲ್ಲಿ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸಬೇಕೆಂದು ಮನವಿ ಮಾಡಿದರು. ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ತಮ್ಮ ಮನವಿ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿ ರಸ್ತೆಗೆ ಅಡ್ಡಲಾಗಿರುವ ಅಂಗಡಿತೆರವುಗೊಳಿಸುವಂತೆ ವ್ಯವಸ್ಥೆ ಮಾಡಲಾಗುವುದು. ಈ ಬಗ್ಗೆ ಪೊಲೀಸ್ ಇಲಾಖೆ, ಪಂಚಾಯಿತಿ ಆಡಳಿತದೊಂದಿಗೆ ಚರ್ಚೆ ನಡೆಸಲಾಗುವುದು ಎಂದು ತಿಳಿಸಿದರು.

## ಪ್ರಮುಖ ಸುದ್ದಿ

# ಕಾನೂನು ಯಾರನ್ನೂ ಭಯಪಡಿಸುವುದಿಲ್ಲ: ಕರಣ್ಣವರ

» **ದಾವಣಗೆರೆ**

ಕಾನೂನು ಇರುವುದುಯಾರನ್ನೂ ಭಯಪಡಿಸಲುಅಲ್ಲ. ಬದಲಿಗೆ ನೊಂದವರಿಗೆ ನ್ಯಾಯಕೊಡಿಸುವ ಮೂಲ ಉದ್ದೇಶವನ್ನು ಕಾನೂನು ಹೊಂದಿದೆಎಂದುಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರಕರಣ್ಣವರ ಹೇಳಿದರು.

ಶನಿವಾರ ನಗರದರೋಟರಿ ಬಾಲಭವನದಲ್ಲಿ ವಾಲ್ಮೀಕಿ ಪ್ರತಿಷ್ಠಾನ, ಸಾರ್ವಜನಿಕ ವಾಲ್ಮೀಕಿಜಯಂತ್ಯೋತ್ಸವ ಸಮಿತಿಗಳ ಆಶ್ರಯದಲ್ಲಿ 3 ನೇ ವರ್ಷದ ಶ್ರೀ ವಾಲ್ಮೀಕಿಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದಜನ ಸಾಮಾನ್ಯರಿಗೆ ಕಾನೂನು ಸೇವೆಗಳ ಕುರಿತು ಮಾಹಿತಿಕಾರ್ಯಾಗಾರಕ್ಕೆ ಚಾಲನೆ ನೀಡಿಅವರು ಮಾತನಾಡಿದರು.

ಅನ್ಯಾಯವಾದಾಗ ನನಗೆ ನ್ಯಾಯ ಸಿಗುತ್ತದೆಯೋ ಇಲ್ಲವೋಎನ್ನುವ ಭಯ ಬಿಟ್ಟು, ಮೊದಲು ಕಾನೂನು ಸೇವಾ ಪ್ರಾಧಿಕಾರವನ್ನು ಸಂಪರ್ಕಿಸಿದರೆ ಉಚಿತ ಕಾನೂನು ನೆರವುದೊರೆಯಲಿದೆ. ಹಾಗಾಗಿ ಕಾನೂನು ಈ ದೇಶದಜನರ ನೆರವಿಗೆಇದೆಯೇ ಹೊರತು ಭಯಪಡಿಸಲುಅಲ್ಲಎಂದು ಹೇಳಿದರು.

ಪ್ರತಿಯೊಬ್ಬರೂ ಕಾನೂನಿನ ತಿಳುವಳಿಕೆ ಹೊಂದಿದಾಗ ಮಾತ್ರಅನ್ಯಾಯ ಪ್ರಶ್ನಿಸುವ ಗುಣ ಬರುತ್ತದೆ.ಆಗ ಸಮ ಸಮಾಜ ನಿರ್ಮಾಣ ಸಾಧ್ಯವಾಗಲಿದೆ.ಭಾರತದ ಸಂವಿಧಾನರಚನೆಗೆರಾಮಾಯಣ, ಮಹಾಭಾರತದಂಥಹ ಮಹಾಕಾವ್ಯಗಳು ಮೂಲ ಪ್ರೇರಣೆಯಾಗಿವೆ. ಈ ಮಹಾಕಾವ್ಯಗಳಲ್ಲಿಬರುವನಮ್ಮಕೌಟುಂಬಿಕ ವ್ಯವಸ್ಥೆ, ನಮ್ಮ ಸಂಸ್ಕೃತಿ, ಆಚಾರ, ವಿಚಾರ, ಸಾಮಾಜಿಕ ಮೌಲ್ಯಗಳನ್ನು ನಮ್ಮ ಸಂವಿಧಾನ ಒಳಗೊಂಡಿದೆ. ಹಾಗಾಗಿ ರಾಮಾಯಣವನ್ನು ಭಾರತೀಯ ಸಂಸ್ಕೃತಿಯ ಮೊದಲ ಸಂವಿಧಾನಎಂದರೆ ತಪ್ಪಾಗಲಾರದುಎಂದರು.



ಜಿಲ್ಲಾ ವಕೀಲರ ಸಂಘದಅಧ್ಯಕ್ಷಎಲ್. ಎಚ್.ಅರುಣ್‌ಕುಮಾರ್ ಮಾತನಾಡಿ, ಮನುಷ್ಯನಿಗೆಜೀವಿಸಲು ಹೇಗೆ ಆಹಾರಅಗತ್ಯವೋಸಮಾಜದಲ್ಲಿಬದುಕಲು ಕಾನೂನು ತಿಳುವಳಿಕೆ ಕೂಡ ಅಷ್ಟೆ ಮುಖ್ಯ, ದೌರ್ಜನ್ಯ, ಅನ್ಯಾಯವಾದಾಗ ಪ್ರಶ್ನಿಸುವ ಗುಣವನ್ನು ಸಂವಿಧಾನ ನಮಗೆ ನೀಡಿದೆ.ಈ ರೀತಿಯ ಸಂವಿಧಾನಜಗತ್ತಿನಯಾವದೇಶ 'ದಲ್ಲಿಯೂಇಲ್ಲಎಂದರು.

ಈ ರೀತಿಯ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಕಾನೂನು ತಿಳುವಳಿಕೆಪಡೆದುಸಮಾಜದಲ್ಲಿತಮ್ಮಮೇಲೆ ನಡೆಯುವ ದಬ್ಬಾಳಿಕೆ, ದೌರ್ಜನ್ಯವನ್ನು ಪ್ರಶ್ನಿಸುವ ಗುಣ ಬೆಳೆಸಿಕೊಳ್ಳಬೇಕೆಂದು ಕರೆ ನೀಡಿದಅವರು, ಮಕ್ಕಳಿಗಾಗಿ ಮಕ್ಕಳ ಹಕ್ಕುಗಳಿವೆ, ಬಾಲ್ಯವಿವಾಹ, ಬಾಲ ಕಾರ್ಮಿಕ ಪದ್ಧತಿ ನಿಷೇಧ ಮೊದಲಾದ ಕಾನೂನುಗಳ ಅರಿವು ಪಡೆಯಬೇಕು ಮತ್ತು ಭವಿಷ್ಯದ ಪ್ರಜೆಗಳಾದ ವಿದ್ಯಾರ್ಥಿಗಳು ಕಾನೂನು ಕುರಿತು ಹೆಚ್ಚು ತಿಳುವಳಿಕೆ ಹೊಂದಬೇಕೆಂದು ತಿಳಿಸಿದರು.

ಹಿರಿಯ ನ್ಯಾಯವಾದಿ ಬಿ.ಎಂ. ಹನುಮಂತಪ್ಪ ಮಾತನಾಡಿ, ಮಕ್ಕಳು ಪೋಷಕರು ಮತ್ತು ಶಿಕ್ಷಕರ ಮಾರ್ಗದರ್ಶನದಲ್ಲಿ ಮುನ್ನಡೆದರೆಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆಎಂದರು. ಸಮಿತಿಯ ಮುಖಂಡಕರಿಯಪ್ಪ ನಾಯಕಅಧ್ಯಕ್ಷತೆ ವಹಿಸಿದ್ದರು.ಮುಖ್ಯಅತಿಥಿಯಾಗಿ ಭಾಗವಹಿಸಿದ್ದ ಅಣ್ಣಾಪುರದ ಹೇಮಣ್ಣ, ಹಿರಿಯ ವಕೀಲ ಆಂಜನೇಯಗುರೂಜಿ ಮಾತನಾಡಿದರು.ಕಾರ್ಯಕ್ರಮದಲ್ಲಿ ಸಾರ್ವಜನಿಕ ವಾಲ್ಮೀಕಿಜಯಂತ್ಯೋತ್ಸವ ಸಮಿತಿಅಧ್ಯಕ್ಷಹುಚ್ಚವ್ವನಹಳ್ಳಿಮಂಜುನಾಥ್, ಸಮಿತಿ ಸದಸ್ಯೆ ನಳಿನಮ್ಮ, ರಾಮಚಂದ್ರಪ್ಪ, ಅಂತರಾಷ್ಟ್ರೀಯಈಜುಪಟುರೇವತಿ ನಾಯಕ ಸೇರಿದಂತೆ ಸಮಿತಿಯ ಪದಾಧಿಕಾರಿಗಳು, ಸೀತಮ್ಮ ಕಾಲೇಜಿನ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಅ.29 ರಂದು ಜಿಲ್ಲಾ ಕ್ರೀಡಾಂಗಣ ಸಮಿತಿ ಸಭೆ

» ಚಿತ್ರದುರ್ಗ

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅ.29 ರಂದು ಸಂಜೆ 4 ಗಂಟೆಗೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಕ್ರೀಡಾಂಗಣ ಸಮಿತಿ ಸಭೆ ಕರೆಯಲಾಗಿದೆ. ಸಭೆಯಲ್ಲಿ ಬಳಕೆದಾರರ ಶುಲ್ಕ ನಿಗದಿ ಕುರಿತು ಚರ್ಚಿಸಲಾಗುವುದು. ನೊಂದಾಯಿತ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಭಾಗವಹಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಬಿ.ಎಂ.ನೆಲವಿಗಿ ತಿಳಿಸಿದ್ದಾರೆ.

### ಮನೆಯಿಂದಲೇ ಜೀವನ ಪ್ರಮಾಣ ಪತ್ರ ಪಡೆಯಿರಿ

» ದಾವಣಗೆರೆ

ಭಾರತೀಯ ಅಂಚೆ ಇಲಾಖೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್‌ಗಳ ಮೂಲಕ ಮನೆ ಬಾಗಿಲಿನಲ್ಲೇ ಪಿಂಚಣಿದಾರರು ಸುಲಭವಾಗಿ ಡಿಜಿಟಲ್ ಜೀವನ ಪ್ರಮಾಣ ಪತ್ರವನ್ನು ಸಲ್ಲಿಸಲು ವ್ಯವಸ್ಥೆ ಕಲ್ಪಿಸಲಾಗಿದೆ. ಪಿಂಚಣಿದಾರರು ಅಥವಾ ಕುಟುಂಬದ ಪಿಂಚಣಿದಾರರು ತಮ್ಮ ಹತ್ತಿರದ ಅಂಚೆ ಕಚೇರಿಯಲ್ಲಿ ಅಥವಾ ಪೋಸ್ಟ್ ಮ್ಯಾನ್ ಮೂಲಕ ರೂ.70 ಶುಲ್ಕ ನೀಡುವುದರೊಂದಿಗೆ ಕೆಲವೇ ನಿಮಿಷಗಳಲ್ಲಿ ಆಧಾರ್ ಸಂಖ್ಯೆ, ಮೊಬೈಲ್ ಸಂಖ್ಯೆ, ಪಿಪಿಓ ಸಂಖ್ಯೆ ಮತ್ತು ಪಿಂಚಣಿದಾರರ ಬ್ಯಾಂಕ್ ಖಾತೆಯ ವಿವರಗಳೊಂದಿಗೆ ತಮ್ಮ ಬೆರಳಚ್ಚು ಪರಿಶೀಲಿಸಿ ಡಿಜಿಟಲ್ ಜೀವನ ಪ್ರಮಾಣ ಪತ್ರವನ್ನು ನ.30 ರೊಳಗಾಗಿ ಪಡೆಯಬಹುದು.

### 2024-25 ನೇ ಸಾಲಿಗೆ ಎಸ್ಸಿ ಹಾಗೂ ಎಸ್ಟಿ ಮಾಧ್ಯಮ ಮಾನ್ಯತೆ ಹೊಂದಿದ ಪತ್ರಕರ್ತರಿಗೆ ಮೀಡಿಯಾ ಕಿಟ್‌ಗೆ ಅರ್ಜಿ

» ಚಿತ್ರದುರ್ಗ

ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2024–25ನೇ ಸಾಲಿಗೆ ಪರಿಶಿಷ್ಟ ಜಾತಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಮಾಧ್ಯಮ ಮಾನ್ಯತೆ ಹೊಂದಿರುವ ಪತ್ರಕರ್ತರಿಗೆ "ಮೀಡಿಯಾ ಕಿಟ್" ವಿತರಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮಾಧ್ಯಮ ಮಾನ್ಯತೆ ಪಡೆದ ಪತ್ರಕರ್ತರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅಥವಾ ಆಯಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಿಂದ ಅರ್ಜಿ ನಮೂನೆಯನ್ನು ಪಡೆದುಕೊಂಡು, ಇಲಾಖೆಯ ಮಾನ್ಯತಾ ಕಾರ್ಡು (ಂಛಿಛಿಡಿಜುಣಚಿಣುಂಟ ಅಚಿಡಿಜ) , ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ,ಜಾತಿ(ಉಪಜಾತಿ),ಪತ್ರಿಕಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೇವಾನುಭವ, ವೇತನ ವಿವರಗಳನ್ನೊಳಗೊಂಡ ಮಾಹಿತಿಯನ್ನು ಭರ್ತಿ ಮಾಡಿ ಸ್ವ–ವಿಳಾಸವಿರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬೇಕು.

ಅರ್ಜಿ ಸಲ್ಲಿಸಬಯಸುವವರು ಅರ್ಜಿಯೊಂದಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ 2024–25ನೇ ಸಾಲಿನಲ್ಲಿ ವಿತರಿಸಲಾಗಿರುವ ಮಾಧ್ಯಮ ಮಾನ್ಯತಾ ಕಾರ್ಡು ಹೊಂದಿರುವ ಬಗ್ಗೆ ದೃಢೀಕೃತ ಜೆರಾಕ್ಸ್ ಪ್ರತಿ, ಜಾತಿ ದೃಢೀಕರಣಕ್ಕಾಗಿ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರದ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು. ಹಾಗೂ ಅರ್ಜಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಮಾಹಿತಿಗಳಿಗೆ ಅಧಿಕೃತ ಪೂರಕ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವದಿನಾಂಕದೊಳಗಾಗಿಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರ್ಕಾರದ ವ್ಯಾಪ್ತಿಗೆ ಒಳಪಡುವ ನಿಗಮ, ಮಂಡಳಿಗಳಿಂದ ಹಾಗೂ ಸರ್ಕಾರದ ಯಾವುದೇ ಇಲಾಖೆಗಳಿಂದ ಈ ಯೋಜನೆಯಡಿ ಮಾಧ್ಯಮ ಕಿಟ್ಗಳನ್ನು ಪಡೆದಿರುವುದಿಲ್ಲ ಎಂದು ರೂ. 100 ರ ಬಾಂಡ್ ನಲ್ಲಿ ಮುಚ್ಚಳಿಕೆ ಪತ್ರವನ್ನು ಸಲ್ಲಿಸಬೇಕು.

ಮಾಧ್ಯಮ ಕಿಟ್ ಒದಗಿಸಲು ಪತ್ರಕರ್ತರ ಸೇವಾ ಹಿರಿತನ, ವಯೋಮಿತಿ ಹಾಗೂ ಸೇವಾನುಭವದ ಗರಿಷ್ಠತೆಯನ್ನು ಪರಿಗಣಿಸಲಾಗುವುದು. ಅರ್ಜಿಯೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ವಿವರ, ಪ್ರಸಾರ ಸಂಖ್ಯೆ, ಪತ್ರಿಕೆಯ ಮಾಧ್ಯಮ ಪಟ್ಟಿಯ ವಿವರ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ದೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 10–11–2024 ರ ಸಂಜೆ 5:00 ಗಂಟೆಯೊಳಗೆ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು. ಲಕೋಟೆಯ ಮೇಲ್ಭಾಗದಲ್ಲಿ "ಪ.ಜಾ ಹಾಗೂ ಪ.ಪಂ.ಮಾಧ್ಯಮ ಮಾನ್ಯತೆ ಪತ್ರಕರ್ತರಿಗೆ ಮೀಡಿಯಾ ಕಿಟ್ ಗಾಗಿ ಅರ್ಜಿ" ಎಂದು ನಮೂದಿಸಿರಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ತಿಪ್ಪಾರೆಡ್ಡಿ ಚಾಲನೆ

» ಚಿತ್ರದುರ್ಗ




ಭಾರತೀಯ ಜನತಾ ಪಾರ್ಟಿಯೂ ದೇಶದಲ್ಲಿ 11 ಕೋಟಿ, ಕರ್ನಾಟಕ ರಾಜ್ಯದಲ್ಲಿ 60 ಲಕ್ಷ ಸದಸ್ಯರನ್ನು ಹೊಂದಿದೆ ಸದಸ್ಯತ್ವ ಮಾಡಲು ಇನ್ನು ಮೂರು ಇದೆ ಕಾಲವಾಕಾಶ ಇರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷಕ್ಕೆ ಸದಸ್ಯರನ್ನಾಗಿ ಮಾಡುವಂತೆ ಮಾಜಿ ಶಾಸಕ ಜಿ.ಎಚ್. ತಿಪ್ಪಾರೆಡ್ಡಿ ಕರೆ ನೀಡಿದರು.

ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಭಾನುವಾರ ಬಿಜೆಪಿ ಸದಸ್ಯತ್ವ ಅಭೀಯಾನದ ಅಂಗವಾಗಿ ನಡೆದ ಸಕ್ರಿಯ ಸದಸ್ಯರ ಅಭೀಯಾನದಲ್ಲಿ ಅರ್ಜಿಯನ್ನು ತುಂಬುವುದರ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಚಿತ್ರದುರ್ಗ ನಗರದ ವಿಧಾನಸಭಾ ಕ್ಷೇತ್ರದ ಪ್ರತಿಯೊಂದು ಬೂತ್‌ನಲ್ಲಿಯೂ ಮೂರು ಜನ ಸಕ್ರಿಯ ಕಾರ್ಯಕರ್ತರು ಇರಬೇಕಿದೆ ಯಾವ ಕಾರ್ಯಕರ್ತ ತನ್ನ ಬೂತ್ ನಲ್ಲಿ 50 ಜನರನ್ನು ಪಕ್ಷದ ಸದಸ್ಯರನ್ನಾಗಿ ಮಾಡುತ್ತಾರೋ ಅಂತಹರು ಪಕ್ಷದಲ್ಲಿ ಸಕ್ರಿಯ ಕಾರ್ಯಕರ್ತರಾಗುತ್ತಾರೆ ಇವರು ಮುಂದಿನ ದಿನದಲ್ಲಿ ಪಕ್ಷದ ವಿವಿಧ ರೀತಿಯ ಹುದ್ದೆಗಳನ್ನು ಅಲಂಕರಿಸಲು ಇದು ಸಹಾಯವಾಗುತ್ತದೆ ಎಂದರು.

ದೇಶದಲ್ಲಿ ಅತಿ ಹೆಚ್ಚು ಸದಸ್ಯರನ್ನು ಹೊಂದಿರುವ ಪಕ್ಷ ನಮ್ಮದಾಗಬೇಕಿದೆ ಇದಕ್ಕಾಗಿ ನಮ್ಮ ಪಕ್ಷದ ಕಾರ್ಯಕರ್ತರರು ಈದಿನದಲ್ಲಿಹೆಚ್ಚಿನಶ್ರಮವನ್ನುಹಾಕುವುದರ ಮೂಲಕ ಸದಸ್ಯರನ್ನು ಮಾಡಬೇಕಿದೆ, ಇದು ಮುಂದಿನ ದಿನದಲ್ಲಿ ಬರುವ ಜಿಲ್ಲಾ.ತಾಲ್ಲೂಕು ಪಂಚಾಯಿತಿಗಳಿಗೆ ಅನುಕೂಲವಾಗಲಿದೆ. ಈ ಚುನಾವಣೆ ಕಾರ್ಯಕರ್ತರ ಚುನಾವಣೆಯಾಗಿದ್ದಿ ಇದಕ್ಕೆ ಈಗಿನಿಂದಲೇ ತಯಾರಿಯನ್ನು ಮಾಡಿಕೊಳ್ಳಬೇಕಿದೆ ಎಂದು ತಿಪ್ಪಾರೆಡ್ಡಿ ತಿಳಿಸಿದ ರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ನಗರಾಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ವಕ್ತಾರ ನಾಗರಾಜ್ ಬೇದ್ರೆ, ಯುವ ಮೋರ್ಚಾದ ಅಧ್ಯಕ್ಷ ರಾಮು, ಬಸಮ್ಮ, ಶಾಂತಮ್ಮ, ಕಿರಣ, ನಾಗರಾಜ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಕೇಂದ್ರ, ರಾಜ್ಯ ಸರ್ಕಾರಗಳ ವಿರುದ್ದ ಚಳುವಳಿ



» ಚಿತ್ರದುರ್ಗ

ಕುಲಾಂತರಿ ಬೀಜಗಳನ್ನು ಮಾರಾಟ ಮಾಡಿ ಬಹುರಾಷ್ಟ್ರೀಯ ಕಂಪನಿಗಳಿಗೆ ಲಕ್ಷಾಂತರ ಕೋಟಿ ರೂ.ಗಳ ಲಾಭ ಮಾಡಿಕೊಡಲು ಹೊರಟಿರುವ ಸರ್ಕಾರಗಳ ವಿರುದ್ದ ಚಳುವಳಿ ಆರಂಭಿಸಲಾಗುವುದೆಂದು ಕರ್ನಾಟಕ ರಾಜ್ಯ ರೈತ ಸಂಘದ ಗೌರವಾಧ್ಯಕ್ಷ ಚಾಮರಸ ಮಾಲಿಪಾಟೀಲ್ ತಿಳಿಸಿದರು.

ತ.ರಾ.ಸು.ರಂಗಮಂದಿರದಲ್ಲಿ ಶನಿವಾರ ನಡೆದ ಪೂರ್ಣ ರಾಜ್ಯ ಸಮಿತಿ ಸಭೆಯ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ರೈತರು ಬಿಕ್ಕಟ್ಟಿನಲ್ಲಿ ಸಿಲುಕಿರುವುದರಿಂದ ನ್ಯಾಯಯುತವಾಗಿ ಸಿಗಬೇಕಾದ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಕುಲಾಂತರಿ ಬೀಜಗಳನ್ನು ಕೃಷಿ ಕ್ಷೇತ್ರಕ್ಕೆ ತರುವ ಹುನ್ನಾರ ನಡೆಯುತ್ತಿರುವುದರಿಂದ ಫಲವತ್ತಾದ ಭೂಮಿ ನಾಶವಾಗುತ್ತಿರುವುದಲ್ಲದೆ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ಪ್ರಾಣಿ–ಪಕ್ಷಿಗಳಿಗೂ ತೊಂದರೆಯಾಗುತ್ತಿದೆ. ಫಸಲ್ ಭೀಮ ಯೋಜನೆಯಡಿ ರೈತರ ಜೇಬಿಗೆ ಕತ್ತರಿ ಹಾಕುತ್ತಿರುವ ಕೇಂದ್ರ ಸರ್ಕಾರದ ವಿರುದ್ದ ಚಳುವಳಿಗೆ ಪ್ರಜಾಸತ್ತಾತ್ಮಕವಾಗಿ ಕಾರ್ಯಕರ್ತರನ್ನು ತಯಾರು ಮಾಡುತ್ತಿದ್ದೇವೆ. ಶಾಸಕರು, ಸಚಿವರು, ಸಂಸದರು ಯಾರು ರೈತರ ಪರವಾಗಿ ಧ್ವನಿ ಎತ್ತುತ್ತಿಲ್ಲ. ಹಾಗಾಗಿ ನಾವುಗಳು ವಿರೋಧ ಪಕ್ಷದವರಾಗಿ ಕೆಲಸ ಮಾಡಲು ತೀರ್ಮಾನಿಸಿದ್ದೇವೆಂದರು.

ಮೂರು ವರ್ಷಕ್ಕೊಮ್ಮೆ ರಾಜ್ಯ ಸಮಿತಿಯನ್ನು ಪುನರ್ ರಚಿಸುವುದು ಪದ್ದತಿ. ಪ್ರತಿ ಜಿಲ್ಲೆಗಳಲ್ಲಿ ಅಧ್ಯಯನ ಶಿಬಿರ ನಡೆಸಿ ರೈತರು, ಮಹಿಳೆಯರು, ವಿದ್ಯಾರ್ಥಿಗಳು, ಯುವ ಜನಾಂಗಕ್ಕೆ ಆಳುವ ಸರ್ಕಾರಗಳು ರೈತರಿಗೆ ಯಾವ ರೀತಿ ಮೋಸ ಮಾಡುತ್ತಿವೆ ಎನ್ನುವುದನ್ನು ತಿಳಿಸುವುದು ನಮ್ಮ ಮುಂದಿರುವ ಸವಾಲು. ಕೃಷಿ ಭೂಮಿ ಮಾರುಕಟ್ಟೆಯನ್ನುಬಹುರಾಷ್ಟ್ರೀಯಕಂಪನಿಗಳಿಗೆ ಮಾರಾಟ ಮಾಡಲು ಹೊರಟಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ದ ದೊಡ್ಡ ರಾಜಕೀಯ ಶಕ್ತಿಯಾಗಿ ಬೆಳೆಯಲು ಸಭೆಯಲ್ಲಿ ನಿರ್ಧರಿಸಲಾಯಿತು ಎಂದರು.

ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಬಗಡಲಪುರ ನಾಗೇಂದ್ರ ಮಾತನಾಡಿ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಕೋಮುವಾದಿಗಳಿಗೆ ಬೆಂಬಲಿಸಲ್ಲ.

ಕುಲಾಂತರಿ ನಿಷೇಧ ಸೇರಿದಂತೆ ಹನ್ನೆರಡು ಅಂಶಗಳಕಾರ್ಯಕ್ರಮಗಳನ್ನುಹಾಕಿಕೊಳ್ಳುತ್ತೇವೆ. ರಾಜ್ಯ, ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದಲ್ಲಿ ರೈತ ವಿರೋಧ ಕಾನೂನುಗಳು ಜಾರಿಯಾಗುತ್ತಿವೆ. ಅದಕ್ಕಾಗಿ ಕುಟುಂಬಕ್ಕೊಬ್ಬ ಸದಸ್ಯ ಊರಿಗೊಬ್ಬ ಕಾರ್ಯಕರ್ತ ಎನ್ನುವ ಗುರಿಯಿಟ್ಟುಕೊಂಡು ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡುತ್ತೇವೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ದ ಹದಿನೆಂಟು ನಿರ್ಣಯಗಳನ್ನು ಕೈಗೊಂಡು ರಾಜ್ಯ ಸಮಿತಿಯನ್ನು ಪುನರ್ ರಚಿಸಿದ್ದೇವೆ. ಯುವ ನಾಯಕತ್ವವನ್ನು ಹೊರ ಹೊಮ್ಮಿಸಲು ತರಬೇತಿ ಶಿಬಿರವನ್ನು ಹಮ್ಮಿಕೊಳ್ಳುತ್ತೇವೆಂದು ತಿಳಿಸಿದರು.

ಪೂರ್ಣ ರಾಜ್ಯ ಸಮಿತಿ ಸಭೆಯಲ್ಲಿ 28 ಜಿಲ್ಲೆಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ತಾಲ್ಲೂಕು ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಪಾಲ್ಗೊಂಡಿದ್ದು, ಸಂಪೂರ್ಣ ಚರ್ಚೆಯಾಗಿದೆ. ಮೂರು ವರ್ಷಕ್ಕೊಮ್ಮೆ ಪುನರ್ ರಚನೆ ಆಗಲೇಬೇಕು. ಪ್ರೊ.ನಂಜುಂಡಸ್ವಾಮಿರವರ ಸ್ಮರಣೆ,ಲೋಕಸಭೆ ಚುನಾವಣೆ ಖರ್ಚುವೆಚ್ಚಗಳಿಗೆ ಸಂಬಂಧಿಸಿದಂತೆ ರಾಜ್ಯ ಸಮಿತಿಯಲ್ಲಿ ಮಂಡಿಸಿದ್ದೇವೆಂದು ನುಡಿದರು.

ಶಿವಾನಂದ ಕುಗ್ವೆ, ಎನ್.ಡಿ.ವಸಂತಕುಮಾರ್, ಎ.ಗೋವಿಂದರಾಜು, ಮಂಜುಳ ಎಸ್.ಅಕ್ಕಿ, ವನಶ್ರಿ, ಗುರುಶಾಂತಪ್ಪ, ಕಲ್ಪನ, ರೈತ ಸಂಘದ ಜಿಲ್ಲಾಧ್ಯಕ್ಷ ಧನಂಜಯ ಹಂಪಯ್ಯನಮಾಳಿಗೆ, ರುದ್ರಸ್ವಾಮಿ ಇನ್ನುಅನೇಕರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಕಾಲುವೇಹಳ್ಳಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

## ಗ್ರಾಮದ ಪ್ರಮುಖ ರಸ್ತೆಯಲ್ಲಿ ಭವ್ಯ ಮೆರವಣಿಗೆ



» ಚಳ್ಳಕೆರೆ

ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದಲ್ಲಿ ವಾಲ್ಮೀಕಿ ಜಯಂತಿ ಹಿನ್ನೆಲೆಯಲ್ಲಿ ಸಮುದಾಯದ ಮುಖಂಡರು ಭವ್ಯವಾದ ಮೆರವಣಿಗೆಯನ್ನು ಗ್ರಾಮದ ಪ್ರಮುಖ ರಸ್ತೆಗಳಲ್ಲಿ ವಿವಿಧ ಕುಂಭ ಮೆರವಣಿಗೆ, ಕಲಾತಂಡಗಳೊಂದಿಗೆ ಚಲಿಸುವ ಮೂಲಕ ಜಯಂತಿ ಆಚರಿಸಿದರು. ಗ್ರಾಮದ ವಾಲ್ಮೀಕಿ ಯುವಕರ ಸಂಘ ಹಾಗೂ ಮಹಿಳಾ ಸಂಘದವತಿಯಿಂದ ಪ್ರತಿವರ್ಷದಂತೆ ಈ ವರ್ಷವೂ ಗ್ರಾಮದ ವಾಲ್ಮೀಕಿ ವೃತ್ತದಲ್ಲಿ ಶ್ರೀವಾಲ್ಮೀಕಿ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಯಿತು. ವಾಲ್ಮೀಕಿ ಜಯಂತಿಯಲ್ಲಿ ಹೆಚ್ಚಿನ ಸಂಖ್ಯೆಯ ಸಮಾಜ ಬಂಧುಗಳು ಭಾಗವಹಿಸಿದ್ದರು. ಗ್ರಾಮದ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಬೆಳಗ್ಗೆ ಪೂಜೆ ನಡೆಸಿ ಪ್ರಸಾದ ವಿತರಿಸಲಾಯಿತು. ನಂತರ ಗ್ರಾಮದ ಹಿರಿಯ ಮುಖಂಡರೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಯಿತು. ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಮಂಗಳವಾದ್ಯ, ಕಲಾತಂಡದೊಂದಿಗೆ ವಾಲ್ಮೀಕಿ ಭಾವಚಿತ್ರದ ಭವ್ಯಮೆರವಣಿಗೆ ನಡೆಸಲಾಯಿತು. ಸಮುದಾಯದ ಮುಖಂಡರಾದ ಗಾದ್ರಿಪಾಲಯ್ಯ, ಕೆ.ಪಿ.ಭೂತಯ್ಯ, ಜಯಪಾಲಯ್ಯ, ಕಾಲುವೇಹಳ್ಳಿಶ್ರೀನಿವಾಸ್, ರಾಘವೇಂದ್ರ, ಜಾಜೂರುಹನುಮಂತಪ್ಪ, ಆರ್.ಪಾಲಯ್ಯ, ಭೂತೇಶ್, ಲೋಕೇಶ್ ಮುಂತಾದವರು ಪಾಲ್ಗೊಂಡಿದ್ದರು. ಬೀದಿಗಳಲ್ಲಿ ಭವ್ಯಮೆರವಣಿಗೆ ನಡೆಸಲಾಯಿತು.




ಚಿತ್ರದುರ್ಗ ಜಿಲ್ಲಾ ಶಾಖೆಯ ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ (ಐಎಮ್ ಎ)ನ 2024–25 ನೇ ಸಾಲಿನ ಅಧ್ಯಕ್ಷರಾಗಿ ಡಾಕ್ಟರ್ ಪಾಲಾಕ್ಷಯ್ಯ ಎಲ್, ಕಾರ್ಯದರ್ಶಿಯಾಗಿ ಡಾ. ಪ್ರಹ್ಲಾದ್ ಎನ್ ಬಿ, ಖಜಾಂಚಿಯಾಗಿ ಡಾಕ್ಟರ್ ಶಿಲ್ಪಾ ಚಂದ್ರಶೇಖರ್ ಆಯ್ಕೆಯಾಗಿದ್ದಾರೆ ಎಂದು ಅಧ್ಯಕ್ಷರಾದ ಡಾಕ್ಟರ್ ಪಿ. ಟಿ. ವಿಜಯಕುಮಾರ್ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಕಾರ್ಯದರ್ಶಿ ಡಾಕ್ಟರ್ ಬಸವರಾಜ್ ಸೇರಿದಂತೆ ಮತ್ತಿತರ ಪದಾಧಿಕಾರಿಗಳು, ಹಿರಿಯ ವೈದ್ಯರು ಉಪಸ್ಥಿತರಿದ್ದರು.

## ೩೦ರಂದು ಭ್ರಷ್ಟಾಚಾರದ ವಿರುದ್ಧ ಜಾಗೃತಿ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಸಂಯುಕ್ತಾಶ್ರಯದಲ್ಲಿ ಇದೇ ಅ.30ರಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ "ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ–2024 ಮತ್ತು ರಾಷ್ಟ್ರದ ಏಳಿಗೆಗಾಗಿ ಸಮಗ್ರತೆಯ ಸಂಸ್ಕೃತಿ ಒಂದು ದಿನದ ಕಾರ್ಯಾಗಾರ ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ರಾಜಸ್ವ ನಿರೀಕ್ಷಕರು, ಗ್ರಾಮ ಲೆಕ್ಕಾಧಿಕಾರಿಗಳು ತಪ್ಪದೇ ಹಾಜರಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ಹೆಣ್ಣು ಮಕ್ಕಳ ದಿನಾಚರಣೆ

» ಚಿತ್ರದುರ್ಗ




ಜೀವನದಲ್ಲಿ ಎದುರಾಗುವ ಕಠಿಣ ಸಮಸ್ಯೆಗಳನ್ನು ಮೆಟ್ಟಿ ನಿಲ್ಲಬೇಕಾದರೆ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು ಎಂದು ನರ್ಸಿಂಗ್ ವಿದ್ಯಾರ್ಥಿಗಳಿಗೆ ಡಾನ್ ಬೋಸ್ಕೋ ಸಂಸ್ಥೆ ನಿರ್ದೇಶಕ ರೆವೆರೆಂಡ್ ಫಾದರ್ ಸಜ್ಜಿಜಾರ್ಜ್ ತಿಳಿಸಿದರು.


ಜಿಲ್ಲಾಡಳಿತ, ಚಿತ್ರ ಡಾನ್‌ಬೋಸ್ಕೋ, ಬ್ರೆಡ್ಸ್ ಬೆಂಗಳೂರು ಇವರುಗಳ ಸಂಯುಕ್ತಾಶ್ರಯದಲ್ಲಿ ತುರುವನೂರು ರಸ್ತೆಯಲ್ಲಿರುವ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ನಡೆದ ಅಂತರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು.

ಪುರುಷ ಪ್ರಧಾನ ಸಮಾಜದಲ್ಲಿ ಹೆಣ್ಣನ್ನು ಎರಡನೆದರ್ಜೆಯನ್ನಾಗಿನೋಡಲಾಗುತ್ತಿದೆ. ಸಾಕಷ್ಟು ತಾರತಮ್ಯ ಅಸಮಾನತೆ ಇನ್ನು ಜೀವಂತವಾಗಿರುವುದರಿಂದ ನಾನಾ ರೀತಿಯ ಶೋಷಣೆಗೆ ಹೆಣ್ಣು ಒಳಗಾಗುತ್ತಿದ್ದಾಳೆ. ಸಮುದಾಯದಲ್ಲಿ ಏನಾದರೂ ಪರಿವರ್ತನೆಯಾಗಬೇಕಾದರೆ ಮೊದಲು ಹೆಣ್ಣು ಶಿಕ್ಷಣವಂತಳಾಗಬೇಕು. ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನದಲ್ಲಿ ಎಲ್ಲರಿಗೂ ಸಮಾನತೆ ನೀಡಿದ್ದಾರೆ. ಪರಿಪಾಲನೆಯಾಗಬೇಕಷ್ಟೆ. ಹಲವಾರು ದಿನಾಚರಣೆಗಳನ್ನು ಆಚರಿಸಲಾಗುತ್ತಿದೆ. ಎಲ್ಲರನ್ನು ಪ್ರೀತಿಸುವ ಒಳಗೊಳ್ಳುವ ಧರ್ಮವೆ ನಿಜವಾದ ಮಾನವೀಯತೆ. ವಿದ್ಯೆಯಿಂದ ಅಧಿಕಾರ ಪಡೆಯಬಹುದು. ಸರ್ಕಾರದಲ್ಲಿ ಎಲ್ಲಾ ಸೌಲಭ್ಯಗಳಿವೆ. ಬಳಸಿಕೊಂಡು ನಿಮ್ಮ ಹಕ್ಕುಗಳನ್ನು ಪಡೆಯಿರಿ ಎಂದು ವಿದ್ಯಾರ್ಥಿನಿಯರಿಗೆ ಕರೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಮಂಜುನಾಥ್ ಎನ್. ಮಾತನಾಡುತ್ತ ಶಿಕ್ಷಣದ ಕಡೆ ಗಮನ ಕೊಟ್ಟು ಚೆನ್ನಾಗಿ ಓದಿ ಸ್ವಾವಲಂಭಿಗಳಾಗಿ ಆತ್ಮವಿಶ್ವಾಸ ಮೂಡಿಸಿಕೊಳ್ಳಿ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡುತ್ತಿವೆ. ಎಲ್ಲಾ ರೀತಿಯ ಸೌಲಭ್ಯಗಳನ್ನು ಬಳಸಿಕೊಂಡು ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ಬಾಳಿ. ನಿಮ್ಮ ರಕ್ಷಣೆಗೆ ಹಲವಾರು ಕಾನೂನುಗಳಿವೆ. ಭಯಪಡುವುದು ಬೇಡ. ಕಾನೂನು ಇದ್ದರೆ ಸಾಲದು. ಪರಿಪಾಲನೆಯಾಗಬೇಕು ಎಂದು ಹೇಳಿದರು.ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರೇಖಾ ಮಾತನಾಡಿ ಸಮಸ್ಯೆಗಳಿಗೆ ಹೆದರಿ ಆತ್ಮಹತ್ಯೆ ಮಾಡಿಕೊಳ್ಳಬೇಡಿ. ಪೋಷಕರು, ಶಿಕ್ಷಕರುಗಳ ಬಳಿ ನಿಮ್ಮ ತೊಂದರೆಗಳನ್ನು ಹೇಳಿಕೊಂಡರೆ ಪರಿಹಾರ ಸಿಗುತ್ತದೆ. ಪೊಲೀಸ್, ಕಾನೂನು ಇದೆ, ಕೌನ್ಸಿಲಿಂಗ್ ಮೂಲಕ ಎಲ್ಲದಕ್ಕೂ ಪರಿಹಾರವಿದೆ. ನಿಮಗೆ ಯಾರಾದರೂ ಲೈಂಗಿಕ ಕಿರುಕುಳ ನೀಡಿದರೆ ಮಕ್ಕಳ ಸಹಾಯವಾಣಿಗೆ ತಿಳಿಸಿ. ಹೆಣ್ಣಿಗೆ ಹದಿನೆಂಟು ವರ್ಷ, ಗಂಡಿಗೆ 21 ವರ್ಷವಾಗಿದ್ದರೆ ಮಾತ್ರ ಮದುವೆಗೆ ಅರ್ಹರು. ಇಲ್ಲವಾದಲ್ಲಿ ಬಾಲ್ಯವಿವಾಹವಾಗುತ್ತದೆ. ನಿಮ್ಮ ಮನೆಗಳಲ್ಲಿ, ಅಕ್ಕಪಕ್ಕದಲ್ಲಿ ಯಾರಾದರೂ ಬಾಲ್ಯ ವಿವಾಹ ಮಾಡಿದರೆ ಮಕ್ಕಳ ಸಹಾಯವಾಣಿ 1098 ಕ್ಕೆ ಕರೆ ಮಾಡಿ ತಿಳಿಸಿ ಎಂದು ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದರು.

ಬಾಲ್ಯ ವಿವಾಹವಾದರೆ ಎರಡು ವರ್ಷ ಜೈಲು, ಒಂದು ಲಕ್ಷ ರೂ.ದಂಡವಿದೆ. ಪೋಕ್ಸೋ ಕಾಯಿದೆಯಡಿ ತಂದೆ–ತಾಯಿಗಳ ಮೇಲೆ ಕೇಸು ದಾಖಲಾಗುತ್ತದೆ. ಮೊದಲು ಶಿಕ್ಷಣವಂತರಾಗಿ ನಿಮ್ಮ ಹಕ್ಕುಗಳ ಬಗ್ಗೆ ಅರಿವು ಮೂಡಿಸಿಕೊಳ್ಳಿ ಎಂದು ತಿಳಿಸಿದರು.

ಹಾಸ್ಟೆಲ್ ವಾರ್ಡ್‌ನ್‌ಗಳಾದ ಹನುಮಂತಪ್ಪ ಪೂಜಾರ್, ದೇವರಾಜ್, ಚಿತ್ರಡಾನ್ ಬೋಸ್ಕೋ ಸಂಸ್ಥೆಯ ಮಂಜುನಾಥ್ ಇವರುಗಳು ವೇದಿಕೆಯಲ್ಲಿದ್ದರು.



# ಕೆಟ್ಟವರ ಸಹವಾಸದಲ್ಲಿ ಇರುವುದಕ್ಕಿಂತ ಏಕಾಂಗಿಯಾಗಿ ಇರುವುದು ಒಳ್ಳೆಯದು

–ಜಾರ್ಜ್ ವಾಷಿಂಗ್ಟನ್,
ಅಮೆರಿಕದ ಮೊದಲ ಅಧ್ಯಕ್ಷ
ಮತ್ತು ಚಿಂತಕ



ಅರ್ಥವಾಯಿತೆ ? ಅರ್ಥವಾಗಿದ್ದರೆ ಸಂತೋಷ. ಅರ್ಥವಾಗದವರಿಗೆ ಮತ್ತು ಅದರ ಇನ್ನಷ್ಟು ಆಳವಾದ ಹಾಗು ನಮ್ಮ ಸಮಾಜದ ವಾಸ್ತವಕ್ಕೆ ಸರಿಹೊಂದಬಹುದಾದ ಸರಳ ಅರ್ಥ ನೀಡುವ ಪ್ರಯತ್ನ.


ಇದು ಎಲ್ಲಾ ವಯಸ್ಸಿನ ಎಲ್ಲಾ ಪ್ರದೇಶದ ಎಲ್ಲಾ ವರ್ಗಗಳಿಗೂ ಅನ್ವಯಿಸುವ ಮಾತು. ಆದರೂ ಹೆಚ್ಚಾಗಿ ಯುವ ವಯಸ್ಸಿನವರಿಗೆ ತುಂಬಾ ಎಚ್ಚರಿಕೆಯ ಅರ್ಥ ಕೊಡುತ್ತದೆ.

ಮೊದಲಿಗೆ ಕೆಟ್ಟವರು ಎಂದರೆ ಯಾರು ? ಎಂಬ ಪ್ರಶ್ನೆ ಉದ್ಭವವಾಗುತ್ತದೆ. ಸಾಮಾನ್ಯವಾಗಿ ನಮ್ಮ ಸಮಾಜದಲ್ಲಿ ಜೂಜು ಕುಡಿತ ಹೆಣ್ಣಿನ ಸಹವಾಸ ಡ್ರಗ್ಸ್ ಕಳ್ಳತನ ಮುಂತಾದ ದುರಭ್ಯಾಸಗಳನ್ನು ಅನಿಯಂತ್ರಿತವಾಗಿ ಹೊಂದಿರುವವರನ್ನು ಕೆಟ್ಟವರು ಎನ್ನಲಾಗುತ್ತದೆ. ಜೊತೆಗೆ ಆಧುನಿಕ ಸಮಾಜದಲ್ಲಿ ರೌಡಿಸಂ ಕಾನೂನು ಬಾಹಿರ ಚಟುವಟಿಕೆಗಳು ಅನೈತಿಕ ವ್ಯವಹಾರಗಳು ಸಮಾಜದ ಸ್ಥಾಪಿತ ಹಿತಾಸಕ್ತಿಗೆ ವಿರುದ್ಧವಾಗಿ ಹಿಂಸೆಯಲ್ಲಿ ತೊಡಗುವುದು ಮುಂತಾದ ಕ್ರಿಮಿನಲ್ ಚಟುವಟಿಕೆಗಳನ್ನು ಮಾಡುವವರು ಸಹ ಕೆಟ್ಟ ಜನರು ಎನಿಸಿಕೊಳ್ಳುತ್ತಾರೆ.

( ಇದನ್ನು ಹೊರತುಪಡಿಸಿ ಆಂತರ್ಯದಲ್ಲಿ ಕೋಪ ಅಸೂಯೆ ದುಡುಕುತನ ಮುಂತಾದ ಕೆಲವು ಕೆಟ್ಟ ಚಾಳಿಗಳು ಇರುತ್ತವೆ. ಇದು ನಮ್ಮೆಲ್ಲರಲ್ಲೂ ಸ್ವಲ್ಪ ಮಟ್ಟಿಗೆ ಇರುತ್ತದೆ. ಅದನ್ನು ಕೆಟ್ಟತನ ಎನ್ನಲಾಗದು ಮತ್ತು ಇದು ಅಪಾಯಕಾರಿಯೂ ಅಲ್ಲ. )

ಮೇಲೆ ಹೇಳಿದ ಕೆಟ್ಟ ವ್ಯಕ್ತಿಗಳ ಸ್ನೇಹ ಅಥವಾ ಸಹವಾಸ ನಾವು ಮಾಡಿದರೆ ಈಗಿನ ಪರಿಸ್ಥಿತಿಯಲ್ಲಿ ನಾವು ಅವರ ಪ್ರಭಾವಕ್ಕೆ ಒಳಗಾಗುವ ಸಾಧ್ಯತೆಗಳೇ ಹೆಚ್ಚು. ಅವರನ್ನು ಒಳ್ಳೆಯ ದಾರಿಗೆ ತರುವ ಅವಕಾಶ ತುಂಬಾ ಕಡಿಮೆ. ಕೆಟ್ಟದ್ದು ಯಾವಾಗಲೂ ಒಳ್ಳೆಯದಕ್ಕಿಂದ ಹೆಚ್ಚು ಆಕರ್ಷಣೆ ಹೊಂದಿರುತ್ತದೆ.

ಸಾಮಾನ್ಯವಾಗಿ ದುರಭ್ಯಾಸ ಮತ್ತು ಕ್ರಿಮಿನಲ್ ಮನೋಭಾವದ ವ್ಯಕ್ತಿಗಳು ಹೆಚ್ಚು ಚಾಕಚಕ್ಯತೆ ಹೊಂದಿರುತ್ತಾರೆ. ಧೈರ್ಯವೂ ತುಸು ಜೋರು. ಇಂತಹವರ ಸಹವಾಸ ಪ್ರಾರಂಭದಲ್ಲಿ ಹೆಚ್ಚು ಆಕರ್ಷಕ ಮತ್ತು ಸುಖಮಯವಾಗಿರುತ್ತದೆ. ಅದರಲ್ಲೂ ಹೆಚ್ಚು ಒತ್ತಡ ಮತ್ತು ಕಷ್ಟದಲ್ಲಿರುವವರಿಗೆ ಕೆಟ್ಟವರು ಆಪದ್ಬಾಂಧವರಂತೆ ಕಾಣುತ್ತಾರೆ. ಆ ಕ್ಷಣದ ನೋವು ಮರೆಯಲು ಇವರು ತುಂಬಾ ಆತ್ಮೀಯ ಸಹಾಯ ಮಾಡುತ್ತಿರುವಂತೆ ಭಾಸವಾಗುತ್ತದೆ. ಪುಕ್ಕಲರಿಗೆ ಇವರು ಹೀರೋಗಳಂತೆ ಕಾಣುತ್ತಾರೆ.



ಆದರೆ ನಿಧಾನವಾಗಿ ಕೆಟ್ಟದ್ದರ ಪರಿಣಾಮ ನಮ್ಮ ಮೇಲಾಗತೊಡಗುತ್ತದೆ. ನಮ್ಮ ಅರಿವಿಗೆ ಬರುವಷ್ಟರಲ್ಲಿ ಅದು ಇಡೀ ಬದುಕಿನ ಹಳಿಯನ್ನೇ ತಪ್ಪಿಸಿ ನಿಯಂತ್ರಣ ಸಿಗದಷ್ಟು ಮುಂದೆ ಹೋಗುವಬಹುದು. ಕೆಲವೊಮ್ಮೆ ನಮ್ಮ ಹಿತೈಷಿಗಳು ಈ ಬಗ್ಗೆ ಎಚ್ಚರಿಕೆ ಕೊಟ್ಟರೂ ನಾವು ನಿರ್ಲಕ್ಷಿಸಿರುತ್ತೇವೆ.

ಇದನ್ನು ಸೂಕ್ಷ್ಮ ದೃಷ್ಟಿಯಿಂದ ಅವಲೋಕಿಸಿಯೇ ಜಾರ್ಜ್ ವಾಷಿಂಗ್ಟನ್ ಕೆಟ್ಟವರಿಗಿಂತ ಏಕಾಂಗಿತನವೇ ಉತ್ತಮ ಎಂದು ಅಭಿಪ್ರಾಯ ಪಟ್ಟಿದ್ದಾರೆ. ಖಂಡಿತ ಇದು ಅಕ್ಷರಶಃ ಸತ್ಯ. ನಮ್ಮ ಮಕ್ಕಳ, ನಮ್ಮ ಸಂಬಂಧಿಗಳ, ನಮ್ಮ ನೆರೆಹೊರೆಯವರ ಅನೇಕ ಘಟನೆಗಳನ್ನು ಗಮನಿಸಿದಾಗ ಇದರ ಮಹತ್ವ ಅರಿವಾಗುತ್ತದೆ. ರಾಜಕೀಯ, ಆರ್ಥಿಕ, ಪ್ರೀತಿ ಪ್ರೇಮಗಳ ಮತ್ತು ಅನೇಕ ಪೋಲೀಸ್ ಪ್ರಕರಣಗಳಲ್ಲಿ ಇದು ಹೆಚ್ಚು ಸ್ಪಷ್ಟವಾಗಿ ಕಾಣುತ್ತದೆ.

ಇನ್ನೂ ಮುಂದುವರಿದು.....

ಏಕಾಂಗಿತನ ಉತ್ತಮ ನಿಜ. ಆದರೆ ಅದರ ಸಂಪೂರ್ಣ ಅರಿವಾಗದೆ ಒಂದು ವ್ಯಕ್ತಿತ್ವ ರೂಪಗೊಳ್ಳದೆ ಏಕಾಂಗಿತನವೂ ಅಪಾಯವಾಗಬಹುದು. ಮಕ್ಕಳು ಯುವಕರಲ್ಲಿ ಅದು ಮಾನಸಿಕ ಖಿನ್ನತೆಯನ್ನು ಹೆಚ್ಚಿಸಬಹುದು. ಅತ್ಯುತ್ತಮ ಗುಣಮಟ್ಟದ ಏಕಾಂಗಿತನ ಮಾತ್ರ ತುಂಬಾ ಒಳ್ಳೆಯದು. ಅಂದರೆ ಓದು ಬರಹ ಯೋಗ ಧ್ಯಾನ ಕ್ರೀಡೆ ಕಲೆ ಸಂಗೀತ ಸಿನಿಮಾ ತೋಟಗಾರಿಕೆ ಸಂಘ ಸಮಾಜ ಸೇವೆ ಪ್ರವಾಸ ಮುಂತಾದ ನಮ್ಮ ಅನುಕೂಲಕರ ಹವ್ಯಾಸಗಳನ್ನು ಬೆಳೆಸಿಕೊಂಡರೆ ಏಕಾಂಗಿತನ ಕೆಟ್ಟವರ ಸಹವಾಸಕ್ಕಿಂತ ಉತ್ತಮವಾಗಿರುತ್ತದೆ. ಈ ಹವ್ಯಾಸಗಳು ನಮ್ಮನ್ನು ಅತ್ಯಂತ ಕ್ರಿಯಾಶೀಲವಾಗಿ ಇಡುವುದಲ್ಲದೆ ಉತ್ತಮ ಸಾಧನೆಗು ದಾರಿ ಮಾಡಿಕೊಡುತ್ತದೆ.

ಇನ್ನೂ ಒಂದು ಹೆಜ್ಜೆ ಮುಂದೆ ಯೋಚಿಸಿದರೆ.....

ಕೆಟ್ಟವರ ಸಹವಾಸಕ್ಕಿಂತ, ಏಕಾಂಗಿತನಕ್ಕಿಂತ ಒಳ್ಳೆಯವರ ಒಡನಾಟ ಅತ್ಯುತ್ತಮ ಎಂದು ಹೇಳಬಹುದು. ಒಳ್ಳೆಯವರು ಎಂಬುದನ್ನು ಹಲವಾರು ಆಯಾಮಗಳಲ್ಲಿ ನೋಡಬೇಕಾಗುತ್ತದೆ.

ಅದು ಅಷ್ಟು ಸುಲಭವಲ್ಲ. ಒಳ್ಳೆಯತನ ಮುಖವಾಡವಾಗಿರದೆ ಸಹಜವಾಗಿರಬೇಕು. ಹೆಚ್ಚು ವಿಶಾಲ ಮನೋಭಾವ ಹೊಂದಿರಬೇಕು. ಒಂದು ಆದರ್ಶ ಮತ್ತು ಮಾರ್ಗದರ್ಶಕ ವ್ಯಕ್ತಿತ್ವ ಹೊಂದಿರಬೇಕು. ಎಲ್ಲಕ್ಕಿಂತ ಹೆಚ್ಚಾಗಿ ನಮ್ಮ ಮನಸ್ಸಿನ ನಿಲುವಿಗೆ ಹತ್ತಿರವಾಗಿರಬೇಕು ಮತ್ತು ಹೊಂದಾಣಿಯಾಗಬೇಕು. ಒಳ್ಳೆಯವರ ನಡುವಿನ ಸಂವಹನ ಸರಳ ಮತ್ತು ಸುಲಲಿತವಾಗಿರಬೇಕು.

ಆಗ ಖಂಡಿತ ಬದುಕಿನ ಕ್ವಾಲಿಟಿ ಹೆಚ್ಚುತ್ತದೆ. ನಮ್ಮ ನೆಮ್ಮದಿಯ ಮಟ್ಟ ಉತ್ತಮ ಸ್ಥಿತಿ ಕಾಯ್ದುಕೊಂಡಿರುತ್ತದೆ.

ಈ ಸಂಕೀರ್ಣ ಸಮಾಜದಲ್ಲಿ ಆಯ್ಕೆಗಳು ಬಹಳಷ್ಟಿವೆ. ಜೊತೆಗೆ ಅನೇಕ ಅನಿವಾರ್ಯತೆಗಳೂ ಇವೆ. ಒತ್ತಡಗಳು ಇವೆ. ಆದರೂ ಎಲ್ಲರ ಜೊತೆ ಪರಿಚಯವಿರಲಿ ಆದರೆ ಆತ್ಮೀಯ ಒಡನಾಟ ಒಳ್ಳೆಯವರೊಂದಿಗೆ ಮಾತ್ರವಿರಲಿ. ಸಾಧ್ಯವಾಗದಿದ್ದರೆ ಏಕಾಂಗಿತನವೇ ಉತ್ತಮ.

ಆದರೆ ಕೆಟ್ಟವರ ಸಹವಾಸ ಬೇಡ.

ಗೌತಮ ಬುದ್ದರ ಒಂದು ಸಂದೇಶ,

" ನಾವು ಬದುಕಿನಲ್ಲಿ ಅನೇಕರೊಂದಿಗೆ ಜೊತೆಯಾಗಿ ಹೆಜ್ಜೆಗಳನ್ನು ಹಾಕಬೇಕಾಗುತ್ತದೆ. ಆದರೆ ಯಾರೊಂದಿಗೆ ಎಷ್ಟು ದೂರ ನಡೆಯಬೇಕೆಂಬ ತೀರ್ಮಾನ ನಮ್ಮ ವಿವೇಚನೆಗೆ ಬಿಟ್ಟದ್ದು. ಅದು ನಮ್ಮ ಜೀವನ ಪ್ರಯಾಣದ ಗುಣಮಟ್ಟ ನಿರ್ಧರಿಸುತ್ತದೆ..."

ಇದು ಈಗಾಗಲೇ ಅನೇಕರ ಅನುಭವಕ್ಕೆ ಬಂದಿರಬಹುದು......

ಇದನ್ನು ಸರಿಯಾಗಿ ಅರ್ಥ ಮಾಡಿಕೊಂಡು ನಿಮ್ಮ ಪ್ರೀತಿ ಪಾತ್ರರಿಗೂ ತಿಳಿಸಿ......ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ.



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

# ಹಾಲುರಾಮೇಶ್ವರ: 11ರೂ ಕಾಣಿಕೆ ಇಂದು 3 ಕೋಟಿ ಆಗಿದೆ

» ಹೊಸದುರ್ಗ

ತಾಲೂಕಿನ ಪುಣ್ಯ ಕ್ಷೇತ್ರಗಳಲ್ಲೊಂದಾದ ಶ್ರೀ ಹಾಲುರಾಮೇಶ್ವರ ಪುಣ್ಯ ಕ್ಷೇತ್ರದಲ್ಲಿ ನಿತ್ಯವೂ ಭಕ್ತರು ಬಂದು ಪೂಜಾ ಕಾರ್ಯಕ್ಕೆ ಕಾಣಿಕೆ ಚೀಟಿ 11 ರೂ ಕೋಟ್ಟು ರಶೀದಿ ಹಾಕಿಸಿರುವ ಹಣ ಈಗ 3 ಕೋಟಿಗೆ ತಲುಪಿದೆ ಎಂದು ಮಾಜಿ ಶಾಸಕ ಇಲ್ಕಲ್‌ವಿಜಯಕುಮಾರ್ ತಿಳಿಸಿದರು.

ಈ ಕುರಿತು ಶುಕ್ರವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು ಧರ್ಮಸ್ಥಳದ ಧರ್ಮಾಧಿಕಾರಿ ಡಾ:ವೀರೇಂದ್ರ ಹೆಗ್ಗಡೆಯವರು ಹೊಸದುರ್ಗ ತಾಲೂಕಿಗೆ ನೀಡಿರುವ ಕೊಡುಗಗಳು ಮತ್ತು ಧರ್ಮ ಕಾರ್ಯಗಳು ಅನನ್ಯ ಹೊಸದುರ್ಗ 1987 ರಲ್ಲಿ ವಿಧಾನ ಸಭಾ ಕ್ಷೇತ್ರಕ್ಕೆ ಜಿ.ರಾಮದಾಸ್ ಶಾಸಕರಾಗಿದ್ದ ಸಂಧರ್ಬದಲ್ಲಿ ಡಾ:ವೀರೇಂದ್ರ ಹೆಗ್ಗಡೆಯವರು ಹೊಸದುರ್ಗಕ್ಕೆ ಬಂದಾಗ ತಾಲೂಕಿನ ಶ್ರೀ ಹಾಲುರಾಮೇಶ್ವರ ಪುಣ್ಯ ಕ್ಷೇತ್ರಕ್ಕೆ ಬೇಟಿ ನೀಡಿ ಪೂಜೆ ಸಲ್ಲಿಸಿದ್ದರು. ಆ ಸಂಧರ್ಬದಲ್ಲಿ ಹೆಗ್ಗಡೆಯವರು ಅಂದೇ ಕ್ಷೇತ್ರದ ಅಭಿವೃದ್ಧಿಗಾಗಿ ಸ್ಥಳದಲ್ಲಿಯೇ 37 ಸಾವಿರ ರೂಗಳನ್ನು ನೀಡದ್ದರು. ಕ್ಷೇತ್ರವನ್ನು ಸುತ್ತು ಹಾಕಿದ ನಂತರ ಪೂಜ್ಯರು ರಾಜ್ಯದಿಂದ ಬರುವ ಭಕ್ತರಿಂದ ದರ್ಶನ ಮತ್ತು ಪೂಜಾ ಕಾರ್ಯಕ್ಕೆಂದು 11 ರೂಗಳ ಕಾಣಿಕೆ ರಶೀದಿ ಹಾಕಿ, ಮುಂದಿನ ದಿನಗಳಲ್ಲಿ ಅದರಿಂದ ಸಾಕಷ್ಟು ಹಣ ಕ್ರೋಡೀಕೃತವಾಗುತ್ತದೆ ಇದರಿಂದ ಬಂದಂತಹ ಹಣದಿಂದ ಕ್ಷೇತ್ರವನ್ನ ಅಭಿವೃದ್ಧಿ ಪಡಿಸಿ ಎಂದು ಪೂಜ್ಯರು ಅಂದೇ ಸಲಹೆ ನೀಡಿ ಮಾರ್ಗದರ್ಶನ ಹಾಕಿಕೊಟ್ಟ ಹೋಗಿದ್ದರು, ಅವರು ಹೋದ ಮರು ದಿನವೇ ಕಾರ್ಯವನ್ನ ಚಾಲನೆಗೆ ತಂದು . ರಶೀದಿಯ ಮೂಲಕ ಬರುವ ಭಕ್ತರಿಂದ 11 ರೂ ಮೋತ್ತ ಪಡೆಯಲಾಗುತಿತ್ತು ಈಗೆ ಪಡೆದಂತಹ ಹಣ ಈಗ 3 ಕೋಟಿ ಆಗಿದೆ ಎಂದರು.

ಪೂಜ್ಯ ಹೆಗ್ಗಡೆಯವರು ಹೊಸದುರ್ಗ ತಾಲೂಕಿನಲ್ಲಿ ಅಭಿವೃದ್ಧಿಯ ಕೆಲಸಕ್ಕಾಗಿ ಕೋಟ್ಯಾಂತರ ರೂಗಳಷ್ಟು ಹಣವನ್ನ ನೀಡಿದ್ದಾರೆ. ಅದರಲ್ಲೂ ಪ್ರಮುಖವಾಗಿ ಶಿಧಿಲಾವಸ್ಥೆಗೆ ಬಂದಿದ್ದ ಹರಿಹರೇಶ್ವರ ದೇವಸ್ಥಾನಕ್ಕೆ 65 ಲಕ್ಷರೂ ನೀಡಿದ್ದಾರೆ ಈ ದೇವಸ್ಥಾನ ಇಂದು ಕಂಗೊಳಿಸುತ್ತಿದೆ ಎಂದರು.ಶ್ರೀ ಹಾಲುರಾಮೇಶ್ವರ ಪುಣ್ಯ ಕ್ಷೇತ್ರ ಹೊಸದುರ್ಗ ತಾಲೂಕಿನಲ್ಲೆ ಅತ್ಯಂತ ಪ್ರಸಿದ್ಧಿ ಪಡೆದಿರುವಂತಹ ಬಹು ದೊಡ್ಡ ದೇವಸ್ಥಾನ ಪುಣ್ಯಕ್ಷೇತ್ರವಾಗಿದ್ದು ಇಲ್ಲಿ ನಿತ್ಯವೂ ಸಹಾ ರಾಮೇಶ್ವರನ ದರ್ಶನ ಪಡೆಯಲು ರಾಜ್ಯದ ಮೂಲೆ ಮೂಲೆಗಳಿಂದ ಭಕ್ತರು ಬರುತ್ತಿರುವ ಸಂಖ್ಯೆ ಹೆಚ್ಚುತ್ತಲೆ ಇದೆ,ಈ ಕ್ಷೇತ್ರಕ್ಕೆ ಇನ್ನಷ್ಟು ಸೌಲಭ್ಯಗಳು ಜೋತೆಗೆ ಸುತ್ತಲೂ ಕಾಂಪೌಂಡ್ ನಿರ್ಮಾಣ ಅತ್ಯಂತ ಮುಖ್ಯವಾಗಿ ಕ್ಷೇತ್ರಕ್ಕೆ ಭದ್ರತೆಯೂ ಕೂಡ ಬಹು ಮುಖ್ಯವಾಗಿ ಆಗಬೇಕಿದೆ ಎಂದು ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.





1987 ರಲ್ಲಿ ಪೂಜ್ಯ ಶ್ರೀ ವೀರೇಂದ್ರ ಹೆಗ್ಗಡೆಯವರು ಭಕ್ತರಿಂದ ಪೂಜಾ ಕಾರ್ಯಕ್ಕೆ ಕಾಣಿಕೆಯ ಚೀಟಿಯಾಗಿ 11 ರೂ ರಶೀದಿಯ ಮೂಲಕ ಕಾಣಿಕೆ ಪಡೆದುಕೊಳ್ಳಿ ಎಂದು ಅವರು ಹಾಕಿ ಕೊಟ್ಟ ಮಾರ್ಗದರ್ಶನ ಅಲ್ಪ ಮೋತ್ತದ ಹಣವಾಗಿರಬಹುದು, ಆದರೆ ಈಗ 3 ಕೋಟಿ ತಲುಪಿರುವುದು ನಿಜಕ್ಕೂ ಹೆಮ್ಮೆಯ ವಿಷಯ.ಈ ಹಣದಲ್ಲಿಯೂ ಕೂಡ ಈಗಾಗಲೆ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನ ಮಾಡಲು ಸಾಧ್ಯವಾಗಿದೆ.

» ಇಲ್ಕಲ್ ವಿಜಯಕುಮಾರ್.ಮಾಜಿ ಶಾಸಕರು
ಹೊಸದುರ್ಗ ವಿಧಾನ ಸಭಾ ಕ್ಷೇತ್ರ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T